ಸಂಪುಟ : 9 ಸಂಚಿಕೆ 20 ಪುಟ : 4 ಬೆಲೆ : 3.00 ಶನಿವಾರ ಫೆಬ್ರವರಿ 17, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 20 Pages : 4 Price : 3.00 Saturday February 17, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಪ್ರವಾಸ



■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು, ನ್ಯಾಯ ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರ ಪ್ರವಾಸ ಇಂತಿದೆ.

ಫೆ. 17 ರಂದು ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕರ್ನಾಟಕ ಸಾಂಸ್ಕೃತಿಕ ನಾಯಕರಾದ ಜಗಜ್ಯೋತಿ ಬಸವಣ್ಣನವರ ಭಾವಚಿತ್ರ ಅನಾವರಣ ಮಾಡುವರು. ಮಧ್ಯಾಹ್ನ 12.30 ಗಂಟೆಗೆ ನೋಂದಾಯಿತ ಕಟ್ಟಡ ಮತ್ತು ಇತರೆ ಕಾರ್ಮಿಕರ ಮಕ್ಕಳಿಗೆ ಲ್ಯಾಪ್‌ಟಾಪ್ ವಿತರಣಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗದಗನಲ್ಲಿ ವಾಸ್ತವ್ಯ ಮಾಡುವರು.

ಫೆ.18 ರಂದು ಬೆಳಿಗ್ಗೆ 9 ಗಂಟೆಗೆ ಶಿರಹಟ್ಟಿ ತಾಲೂಕಿನ ಖಾನಾಪುರ ಗ್ರಾಮದಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನ ಲೋಕಾರ್ಪಣೆ ಹಾಗೂ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ಶಿರಸಿಗೆ ಪ್ರಯಾಣಿಸುವರು.

ಬೆಳಿಗ್ಗೆ 11.30 ಗಂಟೆಗೆ ಶಿರಸಿಯ ಟಿ.ಆರ್.ಸಿ. ಭವನದಲ್ಲಿ ಜರುಗುವ ಸಹಕಾರಿ ಧುರೀಣ ದಿ. ಶಾಂತಾರಾಮ ಹೆಗಡೆ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಪಾಲ್ಗೊಳ್ಳುವರು. ನಂತರ ಸಂಜೆ 4 ಗಂಟೆಗೆ ಶಿರಸಿಯಿಂದ ರಸ್ತೆ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಪ್ರಕಟಣೆ ತಿಳಿಸಿದೆ.

### ನರಗುಂದ ಶಾಸಕ ಸಿ.ಸಿ. ಪಾಟೀಲ ಅಸಮಾಧಾನ

## ನಿರೀಕ್ಷೆ ಹುಸಿಗೊಳಿಸಿದ ಬಜೆಟ್



■ ವಿಜಯಸಾಕ್ಷಿ ಸುದ್ದಿ, ನರಗುಂದ

ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ಎಲ್ಲರ ನಿರೀಕ್ಷೆಗಳನ್ನು ಹುಸಿಗೊಳಿಸಿದೆ. ಮುಖ್ಯವಾಗಿ ಸಿದ್ದರಾಮಯ್ಯನವರಿಗೆ ರಾಜಕೀಯ ಪುನರ್‌ಜನ್ಮ ನೀಡಿದ ಉತ್ತರ ಕರ್ನಾಟಕವನ್ನು ಸಂಪೂರ್ಣವಾಗಿ ಕಡೆಗಣಿಸಿದ್ದಾರೆ. ಕೇಂದ್ರ ಸರ್ಕಾರದಿಂದ ಬರಬೇಕಾದ ಹಣದ ಕುರಿತು ತಪ್ಪು ಅಂಕಿ-ಅಂಶಗಳನ್ನು ಬಜೆಟ್‌ನಲ್ಲಿ ಹೇಳುವ ಮೂಲಕ ಬಜೆಟ್‌ನ ಘನತೆ, ಪಾವಿತ್ರ್ಯತೆಯನ್ನು ಹಾಳು ಮಾಡಿದ್ದಾರೆಂದು ಮಾಜಿ ಸಚಿವ, ನರಗುಂದ ಶಾಸಕ ಸಿ.ಸಿ. ಪಾಟೀಲ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಾಜ್ಯದ ಜನರಿಗೆ ಬರಬೇಕಾದ 13 ಸಾವಿರ ಕೋಟಿ ಈಗಾಗಲೇ ಬಂದಿದೆ. ರಾಜ್ಯದ ಪಾಲಿಗೆ ತೆರಿಗೆ ಹಣದ ರೂಪವಾಗಿ ಬರಬೇಕಾಗಿದ್ದ 27 ಸಾವಿರ ಕೋಟಿ ಹಣದ ಬದಲಾಗಿ 30 ಸಾವಿರ ಕೋಟಿ ಈಗಾಗಲೇ ಬಂದಿದೆ.

3 ಸಾವಿರ ಕೋಟಿ ಹೆಚ್ಚಿಗೆ ತೆರಿಗೆ ಹಣ ರಾಜ್ಯಕ್ಕೆ ಸಂದಾಯವಾಗಿದೆ. ತೆರಿಗೆ ವಸೂಲಿಯಲ್ಲಿ ತೀವ್ರ ಹಿನ್ನಡೆ ಮಾಡಿರುವ ಸರ್ಕಾರ ಬಂದಿರುವ ಹಣವನ್ನು ಅನ್ಯ ಉದ್ದೇಶಗಳಿಗೆ ಬಳಕೆ ಮಾಡಿಕೊಂಡು ಕರ್ನಾಟಕವನ್ನು ದಿವಾಳಿ ಅಂಚಿಗೆ ತಂದು ನಿಲ್ಲಿಸಿದೆ.

ಹಿಂದಿನ ಬಿಜೆಪಿ ಸರ್ಕಾರದ ಸಿಎಂ ಬಸವರಾಜ ಬೊಮ್ಮಾಯಿ ಯಾವುದೇ ಸಾಲ ಮಾಡದೇ ಉಳಿಕೆ ಬಜೆಟ್ ಮಂಡನೆ ಮಾಡಿದ್ದರು. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು 1 ಲಕ್ಷ ಕೋಟಿ ಸಾಲ ಪಡೆದು, 27 ಸಾವಿರ ಕೋಟಿ ಕೊರತೆ ಬಜೆಟ್ ಮಂಡನೆ ಮಾಡಿದ್ದು ಸರ್ಕಾರದ ದಿವಾಳಿತನವನ್ನು ತೋರಿಸುತ್ತದೆ.

ಸಿದ್ದರಾಮಯ್ಯನವರ ರಾಜಕೀಯ ಜೀವನಕ್ಕೆ ಪುನರ್‌ಜನ್ಮ ನೀಡಿದ ಉತ್ತರ ಕರ್ನಾಟಕದ ಬದಾಮಿ ಸೇರಿದಂತೆ ಎಲ್ಲಾ ಉತ್ತರ ಕರ್ನಾಟಕದ ಭಾಗವನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದ್ದು, ಯಾವುದೇ ವಿಶೇಷ ಯೋಜನೆಗಳನ್ನು ನೀಡದೇ ಉತ್ತರ ಕರ್ನಾಟಕಕ್ಕೆ ಬಹುದೊಡ್ಡ ಅನ್ಯಾಯವೆಸಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.

### ಸಿಎಂ ಸಿದ್ದರಾಮಯ್ಯರಿಂದ ಬಜೆಟ್ ಮಂಡನೆ । ಜಿಲ್ಲೆಗಿಲ್ಲ ನಿರೀಕ್ಷಿತ ಕೊಡುಗೆ । ಆರೋಗ್ಯ ಸೇವೆಗೆ ಹೆಚ್ಚು ಬೆಂಬಲ

# ಗದುಗಿಗೆ ಸಿಹಿ-ಕಹಿ ಮಿಶ್ರ ಭಾಗ್ಯದ ಬಜೆಟ್

■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಮಂಡಿಸಿದ 15ನೇ ಬಜೆಟ್‌ನಲ್ಲಿ ಗದಗ ಜಿಲ್ಲೆಯ ಪ್ರತ್ಯೇಕ ಭಾಗ್ಯದ ನಿರೀಕ್ಷೆ ಮತ್ತೊಮ್ಮೆ ಹುಸಿಯಾಗಿದೆ. ಸೂಪರ್ ಸ್ಪೇಷಾಲಿಟಿ ಕಾರ್ಡಿಯಾಕ್ ಸೆಂಟರ್ ಘೋಷಣೆಯೊಂದನ್ನು ಹೊರತುಪಡಿಸಿ ಗದಗ ಜಿಲ್ಲೆಗೆ ವಿಶೇಷವೆನ್ನಿಸುವಂತಹ ಯಾವುದೇ ಕೊಡುಗೆ ಒದಗಿಬಂದಿಲ್ಲ.

ಜಿಲ್ಲಾ ಆಸ್ಪತ್ರೆಯಲ್ಲಿ ಉದ್ಘಾಟನೆಗೆ ಸಜ್ಜಾಗಿರುವ ಕ್ಯಾಥ್‌ಲ್ಯಾಬ್ ಜೊತೆಗೆ ಸೂಪರ್ ಸ್ಪೇಷಾಲಿಟಿ ಕಾರ್ಡಿಯಾಕ್ ಸೆಂಟರ್ ಕಾರ್ಯಾರಂಭಕ್ಕೆ 10 ಕೋಟಿ ರೂ. ಘೋಷಣೆಯಾಗಿದ್ದು, ಪ್ರಸಕ್ತ ಬಜೆಟ್‌ನಲ್ಲಿ ಗದಗ ಜಿಲ್ಲೆಯ ಆರೋಗ್ಯ ಸೇವೆಗೆ ಹೆಚ್ಚು ಬೆಂಬಲ ಸಿಕ್ಕಿರುವುದು ತುಸು ಸಮಾಧಾನ ತಂದಿದೆ.

ಕೊಪ್ಪಳ, ಚಾಮರಾಜನಗರ ಮತ್ತು ಗದಗ ಜಿಲ್ಲಾ ಆಸ್ಪತ್ರೆಯ ನೂತನ 450 ಹಾಸಿಗೆಗಳ ಆಸ್ಪತ್ರೆಯ ಪೀಠೋಪಕರಣ ಖರೀದಿಗೆ 450 ಕೋಟಿ ರೂ., ಶಿರಹಟ್ಟಿ ಸಹಿತ ರಾಜ್ಯದ 7 ತಾಲೂಕುಗಳ 100 ಹಾಸಿಗೆ ತಾಲೂಕು ಆಸ್ಪತ್ರೆ ನಿರ್ಮಾಣಕ್ಕೆ 280 ಕೋಟಿ ರೂ. ಘೋಷಣೆಯಾಗಿದೆ. ಇನ್ನು ಪ್ರಸಕ್ತ ಬಜೆಟ್‌ನಲ್ಲಿ ಮುಂದಿನ ಆರ್ಥಿಕ ವರ್ಷದ ಕುರಿತು ಪ್ರಸ್ತಾಪವಾಗಿದ್ದು, 2025-26ರಲ್ಲಿ ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯ ಸ್ಥಾಪನೆಯಾಗಲಿದೆ ಎನ್ನುವ ಭರವಸೆ ಸಿಕ್ಕಿದೆ.

ಇನ್ನು, ಜಿಲ್ಲೆಯ ರೈತರ ಬಹುದಿನಗಳ ಬೇಡಿಕೆಯಾಗಿದ್ದ ಶೀತಲ ಘಟಕ ನಿರ್ಮಾಣಕ್ಕೆ ಒಪ್ಪಿಗೆ ಸಿಕ್ಕಿದ್ದು, ಗದಗ ಸಹಿತ 5 ಜಿಲ್ಲೆಗಳಲ್ಲಿ ಕೋಲ್ಡ್ ಸ್ಟೋರೇಜ್ ನಿರ್ಮಾಣದ ಭರವಸೆಗೆ ನೀರೆರೆದಿದೆ. ಕರ್ನಾಟಕ ರೈತ ಸಮೃದ್ಧಿ ಯೋಜನೆ ಮೂಲಕ ರೈತರಿಗೆ ಮಾರ್ಗದರ್ಶನ, ಕೃಷಿ ಭಾಗ್ಯ ಮರುಜಾರಿ, ಬೀಜ ಬ್ಯಾಂಕ್, ಕೈಗೆಟುಕುವ ಬೆಲೆಯಲ್ಲಿ ಸಿರಿಧಾನ್ಯ ದೊರಕಿಸಲು ಕ್ರಮ, ರೈತ ಉತ್ಪಾದಕ ಸಂಸ್ಥೆಗಳಿಗೆ ಉತ್ತೇಜನ ಸಿಕ್ಕಿದೆ.

ಹಿಂದಿನ ಬಿಜೆಪಿ ಸರಕಾರದ ಅವಧಿಯಲ್ಲಿ ಮಂಜೂರಾಗಿದ್ದ ಮುಂಡರಗಿ ತಾಲೂಕಿನ ಜಾಲವಾಡಗಿ ಏತ ನೀರಾವರಿ ಯೋಜನೆ, ರೋಣ ತಾಲೂಕಿನ ಮಲ್ಲಾಪುರ ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಪ್ರಸಕ್ತ ಬಜೆಟ್‌ನಲ್ಲಿ ಅನುದಾನ ದೊರೆತಿದೆ. ರಾಜ್ಯದ 25 ಜಿಲ್ಲೆಗಳಲ್ಲಿ ಮಿನಿ ಜವಳಿ ಪಾರ್ಕ್ ಘೋಷಣೆಯಾಗಿದ್ದು, ಗದಗ ಜಿಲ್ಲೆಯೂ ಸ್ಥಾನ ಪಡೆದಲ್ಲಿ ಈ ಭಾಗದ ಜನರ ಬಹುದಿನಗಳ ಬೇಡಿಕೆ ಈಡೇರಿದಂತಾಗುತ್ತದೆ. ಉದ್ಘಾಟನೆಗೊಂಡಿರುವ ಬೆಟಗೇರಿ ತಾರಾಲಯ ವೀಕ್ಷಣೆಗೂ ಬಜೆಟ್ ಅನುಮೋದನೆ ನೀಡಿದೆ.



ಸಿಎಂ ಸಿದ್ದರಾಮಯ್ಯ ನೂತನ ಮರಳು ನೀತಿ 2020 ಅನುಷ್ಠಾನಕ್ಕೆ ಮುಂದಾಗಿರುವುದು ಜಿಲ್ಲೆಯ ಅಕ್ರಮ ಮರಳುಗಾರಿಕೆಗೆ ಕಡಿವಾಣ ಬೀಳುವ ನಿರೀಕ್ಷೆ ಮೂಡಿಸಿದೆ. ಪ್ರಸಕ್ತ ಬಜೆಟ್‌ನಲ್ಲಿ ಪ್ರವಾಸೋದ್ಯಮ ಬೆಳವಣಿಗೆಗೆ ಸಾಕಷ್ಟು ಕಾರ್ಯಕ್ರಮ ಘೋಷಣೆಯಾಗಿದ್ದರೂ ಸಚಿವ ಎಚ್.ಕೆ. ಪಾಟೀಲ ತಮ್ಮ ತವರು ಜಿಲ್ಲೆಗೆ ವಿಶೇಷ ಅನುದಾನ ತರುವಲ್ಲಿ ಹೆಚ್ಚು ಫಲಕಾರಿಯಾಗಿಲ್ಲ. ಲಕ್ಕುಂಡಿ ಸಹಿತ 54 ಪ್ರವಾಸಿ ತಾಣಗಳ ಅಭಿವೃದ್ಧಿಗೆ 804 ಕೋಟಿ ರೂ. ಪ್ರಸ್ತಾವನೆ ಸಲ್ಲಿಕೆಯಾಗಿದ್ದರೂ ಯಾವುದೇ ಅನುದಾನ ಲಭ್ಯವಾಗಿಲ್ಲ. ಡಂಬಳದಲ್ಲಿ ತೋಟಗಾರಿಕೆ ಕಾಲೇಜ್, ಕಪ್ಪತಗುಡ್ಡದಲ್ಲಿ ಔಷಧೀಯ ಸಸ್ಯಗಳ ಸಂರಕ್ಷಣಾ ಕೇಂದ್ರ (ಆಯುರ್ವೇದ ಮಹಾವಿದ್ಯಾಲಯ) ನಿರೀಕ್ಷೆ ಈ ಬಾರಿಯೂ ಹುಸಿಯಾಗಿದೆ.

### ಬಜೆಟ್‌ನಲ್ಲಿ ಜಿಲ್ಲೆಗೆ ದಕ್ಕಿದ್ದಿಷ್ಟು

* ಗದಗ ಜಿಲ್ಲಾಸ್ಪತ್ರೆಯ ಕ್ಯಾಥ್ ಲ್ಯಾಬ್ ಸೌಲಭ್ಯದೊಂದಿಗೆ ಸೂಪರ್ ಸ್ಪೇಷಾಲಿಟಿ ಕಾರ್ಡಿಯಾಕ್ ಯುನಿಟ್ ಆರಂಭಕ್ಕೆ 10 ಕೋಟಿ ರೂ.
* ಶಿರಹಟ್ಟಿ ಸಹಿತ ರಾಜ್ಯದ 7 ತಾಲೂಕು ಕೇಂದ್ರಗಳಲ್ಲಿ 100 ಹಾಸಿಗೆ ಸಾಮರ್ಥ್ಯದ ತಾಲೂಕು ಆಸ್ಪತ್ರೆಗೆ 280 ಕೋಟಿ ರೂ.
* ಗದಗ ಸೇರಿದಂತೆ ಮೂರು ಜಿಲ್ಲಾಸ್ಪತ್ರೆಗಳ ನೂತನ ಕಟ್ಟಡಕ್ಕೆ ಅಗತ್ಯವಿರುವ ವೈದ್ಯಕೀಯ ಪೀಠೋಪಕರಣ ಖರೀದಿಗೆ 150 ಕೋಟಿ ರೂ.
* 2025-26ನೇ ಸಾಲಿಗೆ ಜಿಲ್ಲಾಸ್ಪತ್ರೆಯಲ್ಲಿ ಸಂಯೋಜಿತ ಮತ್ತು ಸಾರ್ವಜನಿಕ ಆರೋಗ್ಯ ಪ್ರಯೋಗಾಲಯ (ಐಪಿಎಚ್‌ಎಲ್)
* ಗದಗ ಜಿಲ್ಲೆಯ ರೋಣ ಸಹಿತ ರಾಜ್ಯದ ಮೂರು ಕಡೆ ಜಿಟಿಟಿಸಿ ನಿರ್ಮಾಣಕ್ಕೆ 150 ಕೋಟಿ ರೂ.
* ರೋಣ ತಾಲೂಕಿನ ಮಲ್ಲಾಪುರ ಬಳಿ ರೈಲ್ವೆ ಮೇಲ್ಸೇತುವೆ ಸಹಿತ ಒಟ್ಟು 6 ಮೇಲ್ಸೇತುವೆ ಹಾಗೂ ಕೆಳಸೇತುವೆಗೆ 350 ಕೋಟಿ ರೂ.
* ಮುಂಡರಗಿ ತಾಲೂಕಿನ ಜಾಲವಾಡಗಿ ಏತ ನೀರಾವರಿ ಯೋಜನೆ ಅನುಷ್ಠಾನಕ್ಕೆ ಅನುದಾನ.
* ಕಪ್ಪತಗುಡ್ಡದಲ್ಲಿ ಪರಿಸರ ಪ್ರವಾಸೋದ್ಯಮಕ್ಕೆ ಉತ್ತೇಜನ.

### ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಯ ಶಕೆಯನ್ನು ಪುನರಾರಂಭಿಸುವ ದಿಕ್ಸೂಚಿ ಬಜೆಟ್

# ಗುಣಾತ್ಮಕ ಬದಲಾವಣೆಯ ಪರ್ವ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದ 15ನೇ ಮುಂಗಡ ಪತ್ರವನ್ನು ಮಂಡಿಸಿರುವ ಸಿಎಂ ಸಿದ್ದರಾಮಯ್ಯನವರು ಕರ್ನಾಟಕ ಮಾದರಿ ಅಭಿವೃದ್ಧಿಯ ಹೊಸ ದೃಷ್ಟಾಂತವನ್ನು ರೂಪಿಸಿ, ಪುರೋಗಾಮಿ ಮುಂಗಡ ಪತ್ರವನ್ನು ರಾಜ್ಯಕ್ಕೆ ನೀಡಿ ಗುಣಾತ್ಮಕ ಬದಲಾವಣೆಯ ಪರ್ವವನ್ನು ಪ್ರಾರಂಭಿಸಿದ್ದಾರೆ ಎಂದು ಕಾನೂನು, ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯದ 1.2 ಕೋಟಿ ಕುಟುಂಬಗಳನ್ನು ಬಡತನ ರೇಖೆಯಿಂದ ಮೇಲಕ್ಕೆತ್ತಿ, ಕೆಳ ಮಧ್ಯಮ ವರ್ಗ ಮತ್ತು ಮಧ್ಯಮ ವರ್ಗದ ಮಟ್ಟಕ್ಕೆ ತಂದು ನಿಲ್ಲಿಸಿ, ಸರ್ವೋದಯ ಸಮಾಜದ ಕಲ್ಪನೆಯನ್ನು ಯಥಾವತ್ತಾಗಿ ನೈಜ ರೂಪದಲ್ಲಿ ಅನುಷ್ಠಾನಗೊಳಿಸುವ ಗ್ಯಾರಂಟಿ ಯೋಜನೆಗಳು ಫಲ



ನೀಡಲಾರಂಭಿಸಿದ್ದು ಶ್ಲಾಘನೀಯ ಬೆಳವಣಿಗೆಯಾಗಿದೆ. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳು ಪ್ರಶಂಸೆಗೆ ಪಾತ್ರವಾಗಿರುವುದರಿಂದ ದಕ್ಷ ಮತ್ತು ಸಂಕಲ್ಪ ಶಕ್ತಿಯುಳ್ಳ ಕರ್ನಾಟಕ ಸರ್ಕಾರದ ಪ್ರಯತ್ನಗಳು ಕೈಗೂಡಿವೆ. ವಿರೋಧ ಪಕ್ಷಗಳ ಟೀಕೆಗೆ ಸರ್ಕಾರದ ಗ್ಯಾರಂಟಿಗಳ ಪರಿಣಾಮಕಾರಿ ಅನುಷ್ಠಾನವೇ ಗ್ಯಾರಂಟಿಯಾಗಿದೆ.

> ಮುಂಗಡ ಪತ್ರದಲ್ಲಿ ಎಲ್ಲಾ ವರ್ಗಗಳ, ಎಲ್ಲಾ ವಲಯಗಳ, ಎಲ್ಲಾ ಭೌಗೋಳಿಕ ಪ್ರದೇಶಗಳ ಸರ್ವಾಂಗೀಣ ಅಭಿವೃದ್ಧಿಯನ್ನು ಪ್ರತಿಪಾದಿಸುವ ಪರಿಣಾಮಕಾರಿ ಅರ್ಥವ್ಯವಸ್ಥೆಯನ್ನು ಅನಾವರಣಗೊಳಿಸಲಾಗಿದೆ. ಗದಗ ಜಿಲ್ಲೆಯ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ರೂ.10.00 ಕೋಟಿಗಳ ವೆಚ್ಚದ ಶೀತಲ ಗೃಹ ನಿರ್ಮಾಣ ಮಾಡುವ ಮೂಲಕ ಹಣ್ಣು-ತರಕಾರಿ ಮಾರುಕಟ್ಟೆಗೆ ದೊಡ್ಡ ಬೆಂಬಲ ದೊರಕಲಿದೆ. ಈ ಅಭಿವೃದ್ಧಿಪರ ಮುಂಗಡ ಪತ್ರವನ್ನು ತುಂಬು ಹೃದಯದಿಂದ ಸ್ವಾಗತಿಸುತ್ತೇನೆ.
>
> - ಎಚ್.ಕೆ. ಪಾಟೀಲ.
> ಕಾನೂನು, ಪ್ರವಾಸೋದ್ಯಮ,
> ಜಿಲ್ಲಾ ಉಸ್ತುವಾರಿ ಸಚಿವರು.

ಗದಗ ಜಿಲ್ಲೆಯ ಜಾಲವಾಡಗಿ ಏತ ನೀರಾವರಿಯನ್ನು ರೂ.7.28 ಕೋಟಿಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲು, ಶಿರಹಟ್ಟಿ ತಾಲ್ಲೂಕು ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು, ಗದಗ ಜಿಲ್ಲೆಯಲ್ಲಿ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯ, ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ರೂ.10.00 ಕೋಟಿ ವೆಚ್ಚದಲ್ಲಿ ಕ್ಯಾತಲ್ಯಾಬ್ ಸೌಲಭ್ಯದೊಂದಿಗೆ ಸೂಪರ್ ಸ್ಪೇಷಾಲಿಟಿ ಕಾರ್ಡಿಯಾಕ್ ಯೂನಿಟ್ (Super Speciality Cardiac Unit) ಸ್ಥಾಪಿಸುವ ನಿರ್ಣಯ, ಗದಗದಲ್ಲಿ 450 ಹಾಸಿಗೆಯ ಆಸ್ಪತ್ರೆಗೆ ವೈದ್ಯಕೀಯ ಉಪಕರಣ ಮತ್ತು ಪೀಠೋಪಕರಣ ಖರೀದಿಗೆ ಹಣ ಒದಗಿಸಿರುವುದು, ಗದಗದಲ್ಲಿ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲು ನಿರ್ಣಯಿಸಲಾಗಿರುವುದು, ಗದಗ ಜಿಲ್ಲೆಯ ಕಪ್ಪತಗುಡ್ಡದಲ್ಲಿ ಪರಿಸರ ಪ್ರವಾಸೋದ್ಯಮ ಉತ್ತೇಜಿಸಿರುವುದು, ಗದಗ ಜಿಲ್ಲೆಯ ರೋಣದಲ್ಲಿ ನಬಾರ್ಡ್ ಸಹಯೋಗದೊಂದಿಗೆ ಹೊಸ ಜಿ.ಟಿ.ಟಿ.ಸಿ ಪ್ರಾರಂಭಿಸುವ ಮೂಲಕ, ರೋಣದ ಮಲ್ಲಾಪುರ ರೈಲ್ವೆ ಮೇಲುಸೇತುವೆ ಕಾಮಗಾರಿ ಘೋಷಿಸಿರುವುದು ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಮಹತ್ವದ ಮತ್ತು ಪರಿಣಾಮಕಾರಿಯಾದ ಅಭಿವೃದ್ಧಿಯ ಶಕೆಯನ್ನು ಪುನರಾರಂಭಿಸುವ ದಿಕ್ಸೂಚಿಯಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಆರೋಪ

## ಜಿಲ್ಲೆಯ ಪ್ರವಾಸೋದ್ಯಮಕ್ಕೆ ಕೊಡುಗೆಯಿಲ್ಲ



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಬಜೆಟ್ ರೈತರ ಸಾಲ ಮನ್ನಾ ನಿರೀಕ್ಷೆ ಹುಸಿಯಾಗಿಸಿದೆ. ಇದರೊಂದಿಗೆ ಉದ್ಯೋಗ ಸೃಷ್ಟಿಗೂ ಯಾವುದೇ ಯೋಜನೆ ನೀಡದ ಕಾಟಾಚಾರದ ಬಜೆಟ್ ಆಗಿದೆ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಆರೋಪಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರಕಾರ ಉದ್ಯೋಗ ಸೃಷ್ಟಿ ಮಾಡುತ್ತಿಲ್ಲ ಎಂದು ಆರೋಪಿಸುವ ಸಿದ್ದರಾಮಯ್ಯ, ತಮ್ಮ ರಾಜ್ಯ ಬಜೆಟ್‌ನಲ್ಲಿ ಒಂದೇ ಒಂದು ಕೈಗಾರಿಕೆ ಸ್ಥಾಪನೆ, ಉದ್ಯೋಗ ಸೃಷ್ಟಿಗೆ ಕಾರ್ಯಕ್ರಮ ಘೋಷಣೆ ಮಾಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸ್ಟಾರ್ಟ್‌ಅಪ್ ಹಬ್ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಕರ್ನಾಟಕಕ್ಕೆ ಸಿಎಂ ಸಿದ್ದರಾಮಯ್ಯ ಸ್ಟಾರ್ಟ್‌ಅಪ್‌ಗೆ ಯಾವ ಅನುದಾನವನ್ನೂ ಘೋಷಿಸಿಲ್ಲ. ಬೆರಳಣಿಕೆಯ ಕಡೆ ಕೌಶಲ್ಯ ಅಭಿವೃದ್ಧಿಗೆ 150 ಕೋಟಿ ರೂ. ಮೀಸಲಿಟ್ಟಿದ್ದು ಹೊರತುಪಡಿಸಿ ಯಾವುದೇ ಬೃಹತ್ ಕಾರ್ಯಕ್ರಮ ಘೋಷಣೆ ಮಾಡಿಲ್ಲ ಎಂದರು.

ಜಿಲ್ಲೆಯವರೇ ಕಾನೂನು ಮತ್ತು ಪ್ರವಾಸೋದ್ಯಮ ಸಚಿವರಾಗಿದ್ದರೂ ಜಿಲ್ಲೆಯ ಪ್ರವಾಸೋದ್ಯಮಕ್ಕೆ ಯಾವುದೇ ಕೊಡುಗೆ ಲಭ್ಯವಾಗಿಲ್ಲ. ಒಟ್ಟಾರೆ 804 ಕೋಟಿ ರೂ. ಪ್ರಸ್ತಾವನೆ ಸಲ್ಲಿಸಿದ್ದರೂ ನಯಾ ಪೈಸೆ ಬಂದಿಲ್ಲ. ಮೊನ್ನೆಯಷ್ಟೆ ಆಟೋ ಚಾಲಕರ ಸಮಾವೇಶದಲ್ಲಿ ಆಟೋ ಚಾಲಕರನ್ನು ಕಾರ್ಮಿಕ ಇಲಾಖೆ ವ್ಯಾಪ್ತಿಗೆ ತರುವುದಾಗಿ ಘೋಷಣೆ ಮಾಡಿ ಮಾತು ಮರೆತಿದ್ದಾರೆ ಎಂದು ಸಚಿವರ ವಿರುದ್ಧ ಹರಿಹಾಯ್ದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಮುಖಂಡರಾದ ಈರಣ್ಣ ಬಾಳಿಕಾಯಿ, ಬಸವರಾಜ ಅಪ್ಪಣ್ಣವರ, ದೇವಪ್ಪ ಮಲ್ಲಸಮುದ್ರ, ಪ್ರಫುಲ್ ಪುಣೇಕರ್ ಮುಂತಾದವರು ಉಪಸ್ಥಿತರಿದ್ದರು.

### ಶ್ರೀ ಚನ್ನವೀರಶರಣರ 29ನೇ ಪುಣ್ಯಸ್ಮರಣೋತ್ಸವ, ಸಾಮೂಹಿಕ ವಿವಾಹ, ಜಾತ್ರಾಮಹೋತ್ಸವ

## ಚನ್ನವೀರ ಶರಣರು ಪವಾಡ ಪುರುಷರು

■ ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದ ನಂತರ ನಲತ್ವಾಡಮಠ ಶರಣರಲ್ಲಿ ಚಿಕೇನಕೊಪ್ಪದ ಚನ್ನವೀರಶರಣು ಅಗ್ರಗಣ್ಯ ಸ್ವಾಮೀಜಿಗಳಾಗಿದ್ದರು ಎಂದು ಶಿರಹಟ್ಟಿ-ಬಾಲೆಹೊಸೂರ ಸಂಸ್ಥಾನಮಠದ ಪೂಜ್ಯಶ್ರೀ ಜ.ಫಕೀರ ದಿಂಗಾಲೇಶ್ವರ ಶ್ರೀಗಳು ನುಡಿದರು.

ಅವರು ತಾಲೂಕಿನ ಸುಕ್ಷೇತ್ರ ಬಳಗಾನೂರ ಗ್ರಾಮದಲ್ಲಿ ಶುಕ್ರವಾರ ಜರುಗಿದ ಮೌನಯೋಗಿ ಚಿಕೇನಕೊಪ್ಪ ಶ್ರೀ ಚನ್ನವೀರಶರಣರ 29ನೇ ಪುಣ್ಯಸ್ಮರಣೋತ್ಸವ, ಸಾಮೂಹಿಕ ವಿವಾಹ ಹಾಗೂ ಜಾತ್ರಾಮಹೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ನೂರಾರು ವರ್ಷಗಳ ಇತಿಹಾಸ ಹೊಂದಿರುವ ಮಠಗಳು ಸಾಕಷ್ಟಿವೆ. ಆದರೆ, ತಮ್ಮದೇ ದಾರಿಯಲ್ಲಿ ಮಠಗಳನ್ನು ಕಟ್ಟಿ ಶಿಕ್ಷಣ, ದಾಸೋಹ ಹಾಗೂ ಸಾಮೂಹಿಕ ವಿವಾಹಗಳನ್ನು ಮಾಡುವ ಮೂಲಕ ಅಂದಿನ ಹಾಗೂ ಇಂದಿನ ಸ್ವಾಮಿಗಳು ಮಠದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ ಎಂದ ಶ್ರೀಗಳು, ಹಿಂದಿನ ಸ್ವಾಮೀಜಿಗಳು ಅರಾಮವಾಗಿದ್ದರು. ಆದರೆ, ಇಂದು ಮುಂದುವರೆದ ಕಾಲದಲ್ಲಿ ಸ್ವಾಮೀಜಿಗಳಾಗುವುದು ಬಹಳ ಕಷ್ಟದ ಕೆಲಸವಾಗಿದೆ ಎಂದು ಹೇಳಿದರು.



ಮದುವೆ ಎನ್ನುವದು ಭಾರತ ಬಿಟ್ಟು ಬೇರೆ ದೇಶದಲ್ಲಿ ಎರಡು ದೇಹಗಳನ್ನು ಕೂಡಿಸುವದಾಗಿದೆ. ಆದರೆ, ಭಾರತದ ಶರಣರ ದೃಷ್ಟಿಯಲ್ಲಿ ಎರಡು ಜೀವಿಗಳನ್ನು ಕೂಡಿಸುವುದಾಗಿದೆ. ಅಂತಹ ಕಾರ್ಯವನ್ನು ಬಳಗಾನೂರಿನ ಶ್ರೀಮಠದಿಂದ ನಿರಂತರವಾಗಿ ಮಾಡುತ್ತಿದ್ದಾರೆ. ಗಂಡಸರಾದವರು ವರದಕ್ಷಿಣೆ ತೆಗೆದುಕೊಳ್ಳದೆ ಮದುವೆ ಆಗಬೇಕು. ತಂದೆ-ತಾಯಿ ಆಸ್ತಿಯಲ್ಲಿ ಪಾಲು ಕೇಳುವವನು ಗಂಡಸು ಅಲ್ಲ, ತಾನೇ ದುಡಿದದ್ದನ್ನು ತಿನ್ನುವನು ಗಂಡಸು. ಗಂಡಸರು ಮನಸ್ಸಿನ ನೆಮ್ಮದಿಗಾಗಿ ದುಡಿಯಬೇಕು ಎಂದು ದಿಂಗಾಲೇಶ್ವರ ಶ್ರೀಗಳು ಹೇಳಿದರು.

ಚಿಕ್ಕಮಲ್ಲಿಗವಾಡದ ಶ್ರೀ ಆಶ್ರಮದ ಪೂಜ್ಯಶ್ರೀ ಎ.ಪಿ. ಪಾಟೀಲ ಗುರೂಜಿ ಮಾತನಾಡಿ, ಗೃಹಸ್ಥಾಶ್ರಮ ಬಹಳ ಸೂಕ್ಷ್ಮ ಜೀವನವಾಗಿದೆ. ಪೂಜ್ಯರ ನುಡಿಯೊಳಗೆ ಶಬ್ದದ ಅರ್ಥವಿರುತ್ತದೆ.

> ಗದುಗಿನ ವೀರೇಶ್ವರ ಪುಣ್ಯಾಶ್ರಮದ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಮಾತನಾಡಿ, ಕಲ್ಲಿಗೆ ಸಂಸ್ಕಾರ ಕೊಟ್ಟು ನೀರು ಹಾಕಿದಾಗ ಹೂವಾಗಿ ಅರಳುವಂತೆ ಚನ್ನವೀರ ಶರಣರು ಭಕ್ತರಿಗೆ ಜೀವನದ ಮಾರ್ಗದರ್ಶನವನ್ನು ಮಾಡಿದ್ದಾರೆ. ದಾನಿಗಳು ಕೊಟ್ಟ ದೇಣಿಗೆಯಿಂದ ಶಿಕ್ಷಣ, ದಾಸೋಹ ಹಾಗೂ ಸಾಮೂಹಿಕ ಮದುವೆಗಳನ್ನು ಮಾಡಿ ಸಮಾಜದ ಹಣವನ್ನು ಸಮಾಜಕ್ಕೆ ನೀಡುತ್ತಿದ್ದಾರೆ ಎಂದು ಹೇಳಿದರು.

▶▶ 3ನೇ ಪುಟಕ್ಕೆ

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

## ಸಂಪಾದಕೀಯ

# ಸಮಾಧಾನ 'ಪರ' ಬಜೆಟ್

ಮುಖ್ಯಮಂತ್ರಿ ಸಿದ್ದರಾಮಯ್ಯ 15ನೇ ಬಾರಿಗೆ ರಾಜ್ಯ ಬಜೆಟ್ ಮಂಡಿಸುವ ಮೂಲಕ ಐತಿಹಾಸಿಕ ದಾಖಲೆ ಮಾಡಿದ್ದಾರೆ. ಈ ಹಿಂದಿನಂತೆ ಈ ಬಜೆಟ್ಟನ್ನು ಜನಪರ, ಅಭಿವೃದ್ಧಿಪರ ಬಜೆಟ್ ಎನ್ನುವುದಕ್ಕಿಂತ ಇದನೊಂದು ಸಮಾಧಾನ ಪರ ಬಜೆಟ್ ಎನ್ನಬಹುದು.

ಸಿದ್ದರಾಮಯ್ಯ ಮಂಡಿಸಿದ ಈ ಹಿಂದಿನ ಬಜೆಟ್‌ಗಿಂತಲೂ ಈ ಬಾರಿ ಅತ್ಯಂತ ವಿಸ್ತೃತವಾಗಿ ಮಾಹಿತಿಯನ್ನು ಒದಗಿಸಿದ್ದಾರೆ. ಸರಿ ಸುಮಾರು 3 ಗಂಟೆ 20 ನಿಮಿಷಗಳ ಕಾಲ ಬಜೆಟ್ ಪ್ರತಿಯನ್ನ ಸಿದ್ದರಾಮಯ್ಯ ಓದಿದರು. ಸರ್ವಸ್ಪರ್ಶಿಯಾಗಿ ಎಲ್ಲ ಕ್ಷೇತ್ರಗಳನ್ನು ತಲುಪುವ ಪ್ರಯತ್ನವನ್ನು ಸಿದ್ದರಾಮಯ್ಯ ಮಾಡಿದ್ದಾರೆ.

ಕೃಷಿ, ತೋಟಗಾರಿಕೆ, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಕ್ಕೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ಅದೇ ರೀತಿ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ, ಪ್ರವಾಸೋದ್ಯಮದ ಅಭಿವೃದ್ಧಿಗೂ ಸಾಕಷ್ಟು ಯೋಜನೆಗಳನ್ನು ಘೋಷಣೆ ಮಾಡಿದ್ದಾರೆ.

ಆದರೆ ಉದ್ಯೋಗ ಸೃಷ್ಟಿಗೆ ಈ ಬಜೆಟ್‌ನಲ್ಲಿ ಯಾವುದೇ ಪ್ರಮುಖ ಕಾರ್ಯಕ್ರಮಗಳನ್ನು ಘೋಷಣೆ ಮಾಡಿಲ್ಲ. ಕೈಗಾರಿಕೆ ಸ್ಥಾಪನೆ ವಿಷಯದಲ್ಲಿ ಈ ಬಜೆಟ್ ಸಂಪೂರ್ಣ ನೀರಸ ಎನ್ನಬಹುದು. ಹೀಗಾಗಿ ಉದ್ಯೋಗ ಸೃಷ್ಟಿ ವಿಷಯದಲ್ಲಿ ಇದೊಂದು ನೀರಸ ಬಜೆಟ್ ಆಗಿದೆ.

ಇನ್ನು ಖಾಸಗೀಕರಣವನ್ನು ವಿರೋಧಿಸುತ್ತಲೇ ಬಂದ ಸಿದ್ದರಾಮಯ್ಯ ಅವರು, ಇಂದಿನ ಬಜೆಟ್‌ನಲ್ಲಿ ಅನೇಕ ಯೋಜನೆಗಳ ಜಾರಿಗೆ ಖಾಸಗಿತ್ವವನ್ನ ಬಯಸಿರುವುದು ಅಚ್ಚರಿ ಮೂಡಿಸಿದೆ. ಈ ಹಿಂದಿನ ಬಿಜೆಪಿ ಸರ್ಕಾರವು ವೈದ್ಯಕೀಯ ಕ್ಷೇತ್ರದಲ್ಲಿ ಖಾಸಗಿ ಸಹ ಭಾಗಿತ್ವವನ್ನ ಅನುಷ್ಠಾನಗೊಳಿಸಿತ್ತು. ಆ ಪರಂಪರೆಯನ್ನ ಸಿದ್ದರಾಮಯ್ಯ ಅವರು ಮುಂದುವರೆಸಿದ್ದಾರೆ.

ಒಟ್ಟಾರೆ ಬಜೆಟ್ ವಿಶ್ಲೇಷಿಸುವುದಾದರೆ ಈ ಬಜೆಟ್‌ನಲ್ಲಿ ದೂರದೃಷ್ಟಿಯ ಕೊರತೆ ಎದುರಾಗುತ್ತಿದೆ. ಸದ್ಯದ ಸಮಸ್ಯೆಗಳಿಗೆ ಪರಿಹಾರ ಕೊಡುವ ನಿಟ್ಟಿನಲ್ಲಿ ಯೋಜನೆಗಳು ಘೋಷಣೆಯಾಗಿದೆ. ಭವಿಷ್ಯದ ದಿನಗಳಲ್ಲಾದರೂ ದೂರಗಾಮಿ ಚಿಂತನೆಯ ಯೋಜನೆಗಳು ಅನುಷ್ಠಾನಗೊಳ್ಳಬೇಕು.

## ಫೆ. 17ಕ್ಕೆ ಆರರ ಪುಟ್ಟ ಪೋರಿ ಸಾಕ್ಷಿಯ ಕವನ ಸಂಕಲನ ಬಿಡುಗಡೆ ಕಾರ್ಯಕ್ರಮ

# ಬಾಲ ಭಾಷೆಯ 'ಸಾಕ್ಷಿ ಪದ್ಯಗಳು'

ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬ ಗಾದೆ ಮಾತನ್ನು ನೆನಪಿಸುವಂತೆ ಕೇವಲ ಆರು ವರ್ಷ ವಯಸ್ಸಿನ ಪುಟ್ಟ ಮಗು ಸಾಕ್ಷಿ ದೇವರೆಡ್ಡಿ ಬರೆದ ಕವನಗಳು ಮುಂದೆ ಆಕೆ ಬಹುದೊಡ್ಡ ಲೇಖಕಿಯಾಗುವ ಎಲ್ಲ ಸಾಧ್ಯತೆಗಳನ್ನು ತೋರುತ್ತವೆ.

ಒಂದೇ ಸಮನೆ ಸುರಿಯುವ ಮಳೆಯಿಂದ ಭೂಮಿ ತಂಪಾಗುವ ಪ್ರಕೃತಿ ಸಹಜ ಕ್ರಿಯೆಯನ್ನು ತನ್ನ ಕವನದಲ್ಲಿ ಒಡ ಮೂಡಿಸಿ, ಗಿಡಮರಗಳು ಹೂವು-ಹಣ್ಣುಗಳನ್ನು ಕೊಡುತ್ತವೆ ಎಂದು ಸಾಕ್ಷಿ ಹೇಳಿದ್ದಾಳೆ. ಅದೆಷ್ಟೇ ಮರವನ್ನು ಕಡಿದರೂ ಅದು ಮತ್ತೆ ಚಿಗಿಯುತ್ತದೆ ಎಂಬುದನ್ನು ತನ್ನ ಕವನದಲ್ಲಿ ಹೇಳಿರುವ ಪುಟ್ಟ ಸಾಕ್ಷಿ ಮನುಷ್ಯನ ವಿಕೃತಿಯನ್ನು ಮತ್ತು ಗಿಡದ ಪ್ರಕೃತಿಯನ್ನು ತುಲನೆ ಮಾಡಿರುವುದಲ್ಲದೆ ಗಿಡ ಮತ್ತೆ ಮತ್ತೆ ಚಿಗುರುತ್ತದೆ ಎಂದು ಹೇಳುವ ಮೂಲಕ ಬದುಕಿನಲ್ಲಿ ಭರವಸೆ ಇರಬೇಕು ಎಂದು ತೋರಿದ್ದಾಳೆ.

ಕಾಗೆ, ಗಿಣಿ, ನವಿಲು ಪಾರಿವಾಳಗಳನ್ನು ತನ್ನ ಬಾಲಸಹಜ ಭಾಷೆಯಲ್ಲಿ ಕರೆಯುತ್ತಾ ಅವುಗಳ ಬಾಹ್ಯ ಸೌಂದರ್ಯ ಮತ್ತು ಗುಣ ವೈಶಿಷ್ಟಗಳನ್ನು ವರ್ಣಿಸಿದ್ದಾಳೆ. ಮೇಲೆ ಹಾರುವ ಹಕ್ಕಿ ಪುಟ್ಟದಾಗಿ ಕಾಣುತ್ತದೆ, ಹಾರಿ ಹತ್ತಿರ ಹತ್ತಿರ ಬಾ ಬಂದು ನನ್ನೊಂದಿಗೆ ಆಟವಾಡು ಎಂದು ಹೇಳುವಲ್ಲಿ ಪ್ರಕೃತಿಯೊಂದಿಗೆ ಆಕೆಯ ಒಡನಾಡುವ ಆಶಯ ವ್ಯಕ್ತವಾಗುತ್ತದೆ.

ಚಿಕ್ಕಂದಿನಿಂದಲೂ ನಾವು ಕಲಿಯುತ್ತಾ ಬಂದ ಒಂದು ಎರಡು ಸಂಖ್ಯೆಗಳನ್ನು ತನ್ನದೇ ಬಾಲ ಭಾಷೆಯಲ್ಲಿ ಒಪ್ಪವಾಗಿ ಕವನವಾಗಿಸಿರುವ ಪುಟ್ಟ ಸಾಕ್ಷಿ ತನ್ನಿಷ್ಟದ




ಸಂಜೆ 5.30ಕ್ಕೆ ಪ್ರಾರಂಭವಾಗುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ್ ವಹಿಸುತ್ತಿದ್ದು, ಆಕಾಶವಾಣಿಯ ಬಸು ಬೇವಿನಗಿಡದ ಪುಸ್ತಕವನ್ನು ಬಿಡುಗಡೆ ಮಾಡುತ್ತಿದ್ದಾರೆ. ಮುಖ್ಯ ಅತಿಥಿಗಳಾಗಿ ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಶಂಕರ್ ಹಲಗತ್ತಿ ಭಾಗವಹಿಸುತ್ತಿದ್ದು, ತಂಗೋಡದ ಖ್ಯಾತ ಮಕ್ಕಳ ಸಾಹಿತಿ ನಾಗರಾಜ್ ಹುಡೆದರವರು ಪುಸ್ತಕವನ್ನು ಅವಲೋಕಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಸರ್ವ ಸದಸ್ಯರು ಮತ್ತು ರವಿ ದೇವರೆಡ್ಡಿ ಅವರ ಗೌರವ ಉಪಸ್ಥಿತಿ ಇರಲಿದೆ.

ಲಾಲಿಪಾಪ್, ಐಸ್ ಕ್ರೀಮ್‌ಗಳನ್ನು ತಿನ್ನಲು ಎಲ್ಲರನ್ನೂ ಆಹ್ವಾನಿಸಿದ್ದಾಳೆ. ಆಟ ಆಡಿ ಸಾಕಾದರೆ ಗಿಡದ ಕೆಳಗೆ ಕೂತ್ಕೊಳ್ಳೋಣ, ಕುಳಿತು ಸಾಕಾದರೆ ಮಲಗಿಕೊಳ್ಳೋಣ, ಮಲಗಿ ಸಾಕಾದರೆ ಮನೆಗೆ ಹೋಗೋಣ, ನಡೆದು ಸಾಕಾದ್ರೆ ಸೈಕಲ್ ಹತ್ತೋಣ ಎಂದು ಪ್ರಾಸಬದ್ಧವಾಗಿ ಒಂದೊಂದೇ ಹಂತಗಳನ್ನು ಪುಟ್ಟ ಸಾಕ್ಷಿ ವರ್ಣಿಸಿದರೆ ಮನಸ್ಸು ಅವುಗಳನ್ನು ಕಲ್ಪಿಸಿಕೊಳ್ಳುತ್ತ ಬಾಲ್ಯದ ದಿನಗಳತ್ತ ಸಾಗುತ್ತದೆ.

ಸಾಕ್ಷಿಯ ಕವನಗಳಲ್ಲಿ ತುಸು ದೊಡ್ಡದೇ ಆಗಿರುವ ಇರುವೆ ಕವನದಲ್ಲಿ ಬೇಸಿಗೆ, ಚಳಿ ಮತ್ತು ಮಳೆಗಾಲಗಳಲ್ಲಿ ನಡೆಯುವ ರೈತಾಪಿ ವರ್ಗದ ಮತ್ತು ಇರುವೆಯಂತಹ ಪುಟ್ಟ ಕೀಟದ ಕ್ರಿಯೆಗಳ ಸೂಕ್ಷ್ಮ ಅವಲೋಕನವಿದೆ. 'ಸೈಕಲ್' ಕವನದಲ್ಲಿ ಊರೆಲ್ಲ ಸುತ್ತಿ ಕಾಲು ನೋವು ಬರಲ್ವಾ, ನಿಂತಲ್ಲೇ ನಿಂತಿರುತ್ತಿ ಊಟ ಯಾರು ಹಾಕಲ್ವಾ, ನಿನ್ನನ್ನು ತುಳಿದವರನ್ನೇ ನೀನು ಹೊತ್ತುಕೊಂಡು ಹೋಗಿ ಗುರಿ ಮುಟ್ಟಿಸುತಿ ಎಂದು ಮಾನವ ಸಹಜ ಸಂವೇದನೆಗಳನ್ನು ಮುದ್ದು ಮುದ್ದಾಗಿ ಸೈಕಲ್‌ನೊಂದಿಗೆ ತೋರುತ್ತಾಳೆ ಸಾಕ್ಷಿ.

'ಅಕ್ಕ-ತಂಗಿ' ಕವನದಲ್ಲಿ ಶಾಲೆಗೆ ಹೋಗಿ ಮನೆಗೆ ಬರುವ ಅಕ್ಕ-ತಂಗಿಯರು ಮತ್ತೆ ಹೊಲಕ್ಕೆ ಹೋಗಿ ಹುಲ್ಲನ್ನು ಕೊಯ್ದು ಟ್ರ್ಯಾಕ್ಟರಿಯಲ್ಲಿ ಹಾಕಿ ಮನೆಗೆ ತಂದು ಆಕಳಿಗೆ ಆ ಹುಲ್ಲನ್ನು ಹಾಕಿ ನಂತರ ಆಕಳ ಹಾಲನ್ನು ಹಿಂಡಿ ಮೊಸರು ಮಾಡಿ ಮೊಸರು ಮಜ್ಜಿಗೆ ಮಾಡಿ ಮಜ್ಜಿಗೆ ಬೆಣ್ಣೆ ತೆಗೆದು ತುಪ್ಪ ಕಾಸಿ ಹೋಳಿಗೆಗೆ ಹಾಕಿಕೊಂಡು ತಿಂದು ಶಕ್ತಿಯನ್ನು ಪಡೆಯಬಹುದು ಎಂಬುದನ್ನು ಯಾವುದೇ ಏರಿಳಿತಗಳಿಲ್ಲದೆ ಒಂದರ ಹಿಂದೆ ಒಂದು ಜರುಗುವ ಕ್ರಿಯೆಗಳನ್ನು ತನ್ನ ಬಾಲ ಸಹಜ ಭಾಷೆಯಲ್ಲಿ ವರ್ಣಿಸಿದ್ದಾಳೆ ಪುಟಾಣಿ ಸಾಕ್ಷಿ.

ಸಾಕ್ಷಿಯ ಈ ಎಲ್ಲ ಕವನಗಳನ್ನು ಆಕೆಯ ಬಾಲ ಭಾಷೆಯಲ್ಲಿ ಕೇಳಿ ಅವುಗಳನ್ನು ಬರೆದುಕೊಂಡು ಜತನವಾಗಿ ಇಟ್ಟ ತಾಯಿ ರೇಖಾ ಅವರ ಶ್ರಮ ಸಾರ್ಥಕವಾಗಿದೆ. ಮನೆಯಲ್ಲಿ ಹಿರಿಯ ಜೀವಗಳು ಇದ್ದರೆ ಮಗು ಏನೆಲ್ಲವನ್ನು ಕಲಿಯಬಹುದು ಎಂಬುದನ್ನು ಪುಟ್ಟ ಸಾಕ್ಷಿಯ ಅಜ್ಜಿಯೊಂದಿಗಿನ ಒಡನಾಟ ತೋರುತ್ತದೆ. ಪುಟ್ಟ ಪುಟ್ಟ ಮಕ್ಕಳಿಂದ ಹಿಡಿದು ಮುದುಕರವರೆಗೆ ಎಲ್ಲರೂ ಮೊಬೈಲ್ ಎಂಬ ಮಾಯಾಂಗನೆಯ ಮುಂದೆ ಮಂಡಿಯೂರಿ ಕುಳಿತಿರುವಾಗ ನಮ್ಮ ಪುಟ್ಟ ಸಾಕ್ಷಿ ತನ್ನ ಬಾಲ ಭಾಷೆಯಲ್ಲಿ ತನಗೆ ಗೊತ್ತಿಲ್ಲದೆ ಕವನಗಳನ್ನು ರಚಿಸುತ್ತಿರುವುದು ಅದ್ಭುತವೇ ಸರಿ.

ಮನೆಯೇ ಮೊದಲ ಪಾಠಶಾಲೆ ತಾಯಿ ತಾನೇ ಮೊದಲ ಗುರುವು ಎಂಬ ಮಾತಿನಂತೆ ಸಾಕ್ಷಿಯ ಕಾವ್ಯಾಭಿವ್ಯಕ್ತಿಗೆ ನೀರುಣಿಸಿ ಸಲಹುತ್ತಿರುವ ತಂದೆ ರವಿ ದೇವರೆಡ್ಡಿ ಅವರು ಖ್ಯಾತ ಪರಿಸರ ತಜ್ಞ, ವೈಜ್ಞಾನಿಕ ಚಿಂತಕರು ಮತ್ತು ಶೈಕ್ಷಣಿಕವಾಗಿ ಹೊಸ ಆವಿಷ್ಕಾರಗಳನ್ನು ಮಾಡುವ ಕ್ರಿಯಾಶೀಲ ಶಿಕ್ಷಕರಾಗಿದ್ದಾರೆ. ಮಗಳ ಪದ್ಯಗಳ ಮೊದಲ ಓದುಗರಾಗಿ ಅವುಗಳನ್ನೆಲ್ಲ ಒಂದೆಡೆ ಸಂಗ್ರಹಿಸಿ ಪುಸ್ತಕ ರೂಪಕ್ಕೆ ತರುವಲ್ಲಿ ತಂದೆ-ತಾಯಿಯರ ಶ್ರಮ ಅಪಾರ.

ಧಾರವಾಡದ 'ಚಿಲಿಪಿಲಿ ಪ್ರಕಾಶನ' ಸಂಸ್ಥೆಯವರು ಕುಮಾರಿ ಸಾಕ್ಷಿ ರವಿ ದೇವರೆಡ್ಡಿ ಅವರ ಕವನಗಳನ್ನು 'ಸಾಕ್ಷಿ ಪದ್ಯಗಳು' ಎಂಬ ಹೆಸರಿನಲ್ಲಿ ಕೃತಿ ರಚನೆ ಮಾಡಲು ಪ್ರೋತ್ಸಾಹಿಸಿದ್ದಾರೆ. ಪುಟ್ಟ ಸಾಕ್ಷಿಯ ಜನ್ಮದಿನವಾದ ಫೆ.17ರಂದು ಗದಗ ನಗರದ ತೋಂಟದ ಸಿದ್ದಲಿಂಗ ಶ್ರೀಗಳ ಕನ್ನಡ ಭವನ (ಕನ್ನಡ ಸಾಹಿತ್ಯ ಪರಿಷತ್ ಕಾರ್ಯಾಲಯ)ದಲ್ಲಿ ಪೂಜ್ಯಶ್ರೀ ಮ.ನಿ.ಪ್ರ ಶಿವಕುಮಾರ ಮಹಾಸ್ವಾಮಿಗಳು ನಂದಿವೇರಿ ಸಂಸ್ಥಾನ ಮಠ, ಡೋಣಿ ಗದಗ್ ಇವರ ದಿವ್ಯ ಸನ್ನಿಧಾನದಲ್ಲಿ ಜಿಲ್ಲಾ ಕಸಾಪ ಮತ್ತು ಚಿಲಿಪಿಲಿ ಪ್ರಕಾಶನ ಸಂಸ್ಥೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಸಾಕ್ಷಿಯ 'ಸಾಕ್ಷಿ ಪದ್ಯಗಳು' ಕೃತಿ ಲೋಕಾರ್ಪಣೆಗೊಳ್ಳಲಿದೆ.

**– ವೀಣಾ ಹೇಮಂತ್ ಗೌಡ ಪಾಟೀಲ್.**
**ಮುಂಡರಗಿ, ಗದಗ.**

## ವಿಕಲಚೇತನರ ವಿಶೇಷ ಗ್ರಾಮ ಸಭೆಯಲ್ಲಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ

# ಸೌಲಭ್ಯ ಪಡೆಯಲು ಗುರುತಿನ ಚೀಟಿ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ವಿಜಯಸಾಕ್ಷಿ ಸುದ್ದಿ, ಸರಕಾರ ವಿಕಲಚೇತನರ ಭವಿಷ್ಯ ರೂಪಿಸಲು ಹಲವಾರು ಯೋಜನೆಗಳನ್ನು ಜಾರಿಗೆ ತಂದು ಅನುಷ್ಠಾನಗೊಳಿಸಿದೆ. ವಿಕಲಚೇತನ ಫಲಾನುಭವಿಗಳು ಅವಶ್ಯವಿರುವ ದಾಖಲಾತಿಗಳನ್ನು ಒದಗಿಸಿ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಗ್ರಾಮ ಪಂಚಾಯತ ಅಧ್ಯಕ್ಷ ಕೆ.ಎಸ್. ಪೂಜಾರ ಹೇಳಿದರು.

ಇಲ್ಲಿಯ ಅನ್ನದಾನೀಶ್ವರ ಸಭಾ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಹಯೋಗದಲ್ಲಿ ಗ್ರಾಮ ಪಂಚಾಯತ ಆಶ್ರಯದಲ್ಲಿ ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಸರಕಾರದಿಂದ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ಕಾರ್ಯಾಗಾರದ ವಿಕಲಚೇತನರ ವಿಶೇಷ ಗ್ರಾಮ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿಕಲಚೇತನರು ಸಾಮಾನ್ಯರಂತೆ ಜೀವನ ನಡೆಸಲು ಸರಕಾರ ನೀಡುವ ಮಾಶಾಸನ ಸೇರಿದಂತೆ ಸಬ್ಸಿಡಿ ದರದಲ್ಲಿ ಸಾಲ ಸೌಲಭ್ಯವನ್ನು ಪಡೆದುಕೊಂಡು ಉತ್ತಮ ಉದ್ಯೋಗವನ್ನು ಮಾಡುವುದರೊಂದಿಗೆ ಸ್ವಾವಲಂಬಿ ಜೀವನ ನಡೆಸಬೇಕು. ಸಮಾಜದಲ್ಲಿ ಶೇ 100ರಷ್ಟು ಅಂಗವಿಕಲತೆಯುಳ್ಳವರು ಸಹ ಉತ್ತಮ ಸಾಧನೆ ಮಾಡಿ ಪ್ರಸಿದ್ಧರಾಗಿದ್ದಾರೆ. ಸರಕಾರದ ಸೌಲಭ್ಯವನ್ನು ಪಡೆದುಕೊಳ್ಳಲು ವಿಶೇಷ ಗುರುತಿನ ಚೀಟಿ ಅವಶ್ಯವಿದ್ದು, ಈ ಗುರುತಿನ ಚೀಟಿಯಿಂದ 800-2000 ರೂವರೆಗೂ ಮಾಶಸನ ಪಡೆದುಕೊಳ್ಳಬಹುದು. ಗ್ರಾ.ಪಂನಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿದ್ದು, ಅವರ ಸಹಾಯದಿಂದ ಚೀಟಿ ಪಡೆದುಕೊಳ್ಳಬೇಕು ಎಂದರು.



ಎಲ್ಲ ವಿಕಲಚೇತನರು ಕಡ್ಡಾಯವಾಗಿ ವಿಶೇಷ ಗುರುತಿನ ಚೀಟಿಯನ್ನು ಪಡೆದುಕೊಂಡಾಗ ಮಾತ್ರ ಸರಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಲು ಅರ್ಹರಾಗುತ್ತಾರೆ. ವಿಕಲಚೇತನರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ನಂತರ ಪ್ರತಿ ಬುಧವಾರ ಜಿಲ್ಲಾ ಆಸ್ಪತ್ರೆಯಲ್ಲಿ ನಡೆಯುವ ಆರೋಗ್ಯ ತಪಾಸಣೆಯಲ್ಲಿ ಭಾಗವಹಿಸಿ ವಿಕಲಚೇತನರ ಗುರುತಿನ ಚೀಟಿಯನ್ನು ಪಡೆದುಕೊಳ್ಳಬೇಕು ಎಂದು ತಾಲೂಕಾ ಪುನರ್ವಸತಿ ಕಾರ್ಯಕರ್ತ ಖಾಜಾಹುಸೇನ ಕಾತರಕಿ ವಿವರಿಸಿದರು.

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ತಾಲೂಕಾ ಪುನರ್ವಸತಿ ಕಾರ್ಯಕರ್ತ ಖಾಜಾಹುಸೇನ ಕಾತರಕಿ ಮಾತನಾಡಿ, ಗುರುತಿನ ಚೀಟಿಯಿಂದ ಸರಕಾರದ ಸ್ವಯಂ ಉದ್ಯೋಗ ಮಾಡಲು ಸಬ್ಸಿಡಿ ಸಾಲ ಸೌಲಭ್ಯ, ಮೀಸಲಾತಿ, ಪರಿಕರಗಳು, ಬಸ್ ಮತ್ತು ಟ್ರೇನ್‌ಗಳಿಗೆ ಉಚಿತ ಪಾಸ್ ಸೌಲಭ್ಯವನ್ನು ಪಡೆಕೊಳ್ಳಬಹುದು. ಫೆ.27ರಂದು ವಿಕಲಚೇತನರ ಜಿಲ್ಲಾ ಮಟ್ಟದ ಶಿಬಿರವನ್ನು ಏರ್ಪಡಿಸಲಾಗಿದ್ದು, ತಮಗೆ ಅವಶ್ಯವಿರುವ ವಿವಿಧ ಪರಿಕರಗಳನ್ನು ಪಡೆಯಬಹುದಾಗಿದೆ ಎಂದು ವಿವರಿಸಿದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸದಸ್ಯರಾದ ಬಸವರಾಜ ಯಲಿಶಿರುಂಜ, ಕುಬೇರಪ್ಪ ಬೆಂತೂರು, ವೀರಣ್ಣ ಚಕ್ರಸಾಲಿ, ಲಕ್ಷ್ಮಣ ಗುಡಸಲಮನಿ, ಮಹಾಂತೇಶ ಕಮತರ, ರಮೇಶ ಭಾವಿ, ವಿರುಪಾಕ್ಷಿ ಬೆಟಗೇರಿ, ಲಲಿತಾ ಗದಗಿನ, ಈರಮ್ಮ ಚಬ್ಬರಭಾವಿ, ಮಂಜುಳಾ ಮೆಣಸಿನಕಾಯಿ, ಗಂಗಮ್ಮ ಪೂಜಾರ, ಹಾಗೂ ಪಿ.ಡಿ.ಓ ರಾಜಕುಮಾರ ಭಜಂತ್ರಿ ಉಪಸ್ಥಿತರಿದ್ದರು. ಕಾರ್ಯದರ್ಶಿ ತುಕಾರಾಮ ಹುಲಗಣ್ಣವರ ಸ್ವಾಗತಿಸಿದರು. ಗ್ರಾಮೀಣ ಪುನರ್ವಸತಿ ಕಾರ್ಯಕರ್ತೆ ರತ್ನಾ ಮುರಾರಿ ವಂದಿಸಿದರು.

# ಸಂತ ಸೇವಾಲಾಲ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಡವಿಸೋಮಾಪೂರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಸಣ್ಣ ತಾಂಡೆ ಶಾಲೆಯಲ್ಲಿ ಸಂತ ಸೇವಾಲಾಲ ಜಯಂತಿ ಆಚರಿಸಲಾಯಿತು. ಶಾಲೆಯ ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್. ಸೇವಾಲಾಲ ಅವರ ಜೀವನ ಸಂದೇಶಗಳ ಕುರಿತು ಮಾತನಾಡಿದರು.

ಶಾಲೆಯ ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಶಾಲಾ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಮಾರುತಿ ಪವಾರ, ಥಾವರೆಪ್ಪ ಪವಾರ, ಬಿಸಿಯೂಟ ಸಿಬ್ಬಂದಿಗಳಾದ ಗಂಗವ್ವ ಲಮಾಣಿ, ಸಾವಿತ್ರಿ ರಾಠೋಡ, ದೇವಕ್ಕ ಲಮಾಣಿ, ರೇಖಾ ಪವಾರ, ಸಕ್ರವ್ವ ಲಮಾಣಿ, ಗೀತಾ ರಾಠೋಡ, ಶಾಲಾ ಮಕ್ಕಳು ಪಾಲ್ಗೊಂಡಿದ್ದರು.

# ಇಂದು ಕಲ್ಲಾಪೂರದಲ್ಲಿ ಸಾಂಸ್ಕೃತಿಕ ಸೌರಭ-2024

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕರ್ನಾಟಕ ಸಂಭ್ರಮ-50ರ ಅಂಗವಾಗಿ ಸಾಂಸ್ಕೃತಿಕ ಸೌರಭ-2024ನ್ನು ನರಗುಂದ ತಾಲೂಕು ಕಲ್ಲಾಪೂರದಲ್ಲಿ ಶ್ರೀ ಬಸವೇಶ್ವರ ದೇವಸ್ತಾನದ ಆವರಣದಲ್ಲಿ ಫೆಬ್ರವರಿ 17 ರಂದು ಸಂಜೆ 5.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಬೈರನಹಟ್ಟಿ ಹಾಗೂ ಶ್ರೀ ತೋಂಟದಾರ್ಯ ಮಠದ ದೊರೆಸ್ವಾಮಿ ವಿರಕ್ತಮಠದ ಮ.ನಿ.ಪ್ರ. ಶಾಂತಲಿಂಗ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸುವರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಶಿರೋಳ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ಹನುಮವ್ವ ಹಿರೇಮನಿ, ಗ್ರಾಮ ಪಂಚಾಯತ್ ಉಪಾಧ್ಯಕ್ಷರಾದ ಹನುಮಂತಗೌಡ ತಿರಕನಗೌಡರ ಆಗಮಿಸುವರು.

ವಿಶ್ವದ ಆಹ್ವಾನಿತರಾಗಿ ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಕೆ.ಎಚ್. ಚನ್ನೂರು ಆಗಮಿಸುವರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರಯ್ಯ ಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.

# ರೈತ ಬಾಂಧವರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ತಾಲೂಕಿನ ರೈತ ಬಾಂಧವರಿಗೆ ಮುಂಡರಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ತಮ್ಮ ಕೃಷಿ ಹುಟ್ಟುವಳಿಗಳನ್ನು ಮಾರಾಟ ಮಾಡಲು ಕೋರಲಾಗಿದೆ.

ತಮ್ಮ ಕೃಷಿ ಉತ್ಪನ್ನಗಳನ್ನು ಸಮಿತಿಯ ಪ್ರಾಂಗಣದಲ್ಲಿ (ಎಪಿಎಂಸಿ) ಇ-ಟೆಂಡರ್ ಮೂಲಕ ಮಾರಾಟ ಮಾಡಿ ಸ್ಪರ್ಧಾತ್ಮಕ ಬೆಲೆಯನ್ನು ಪಡೆಯಬೇಕು. ತಮ್ಮ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಿದಾಗ ದಲ್ಲಾಳಿ (ಕಮಿಷನ್) ನೀಡಬೇಡಿ. ಬಿಳಿ ಚೀಟಿಯನ್ನು ತಿರಸ್ಕರಿಸಿ, ಅಧಿಕೃತ ಲೆಕ್ಕ ತಿರುವಳಿ ಪಟ್ಟಿಯನ್ನು ಕೇಳಿ ಪಡೆಯಿರಿ. ವಿದ್ಯುನ್ಮಾನ (ಎಲೆಕ್ಟ್ರಾನಿಕ್) ತೂಕದ ಯಂತ್ರದ ಮೂಲಕವೇ ಉತ್ಪನ್ನಗಳನ್ನು ತೂಕ ಮಾಡಿಸಬೇಕು. ತಮ್ಮ ಕೃಷಿ ಹುಟ್ಟುವಳಿಗಳನ್ನು ಮಾರಾಟ ಮಾಡಿದ ತಕ್ಷಣವೇ ಹಣವನ್ನು ಕೇಳಿ ಪಡೆಯಬೇಕು. ಮಾರಾಟದ ಪ್ರಕ್ರಿಯೆಯಲ್ಲಿ ಏನಾದರೂ ಸಮಸ್ಯೆಗಳು ಉದ್ಭವಿಸಿದಲ್ಲಿ ತಕ್ಷಣವೇ ಸಮಿತಿಯಲ್ಲಿನ ಅಧಿಕಾರಿ/ಸಿಬ್ಬಂದಿಯವರನ್ನು ಸಂಪರ್ಕಿಸಬಹುದಾಗಿದೆ.

# 'ಸಾಕ್ಷಿ ಪದ್ಯಗಳು' ಕೃತಿ ಲೋಕಾರ್ಪಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ತೋಂಟದ ಸಿದ್ದಲಿಂಗ ಶ್ರೀಗಳ ಕನ್ನಡ ಭವನ, ಜಿಲ್ಲಾ ಕಸಾಪ ಕಾರ್ಯಾಲಯದಲ್ಲಿ ಕಸಾಪ ಜಿಲ್ಲಾ ಘಟಕ ಗದಗ ಹಾಗೂ ಚಿಲಿಪಿಲಿ ಪ್ರಕಾಶನ ಧಾರವಾಡ ಇವುಗಳ ಸಂಯುಕ್ತ ಆಶ್ರಯದಲ್ಲಿ ಫೆ.17ರಂದು ಸಂಜೆ 6ಕ್ಕೆ ಕು. ಸಾಕ್ಷಿ ದೇವರಡ್ಡಿ ರಚನೆಯ 'ಸಾಕ್ಷಿ ಪದ್ಯಗಳು' ಕೃತಿ ಲೋಕಾರ್ಪಣೆಗೊಳ್ಳಲಿದೆ.



ಕಾರ್ಯಕ್ರಮದ ಸಾನ್ನಿಧ್ಯವನ್ನು ಕಪ್ಪತ್ತಗುಡ್ಡದ ಶ್ರೀ ನಂದಿವೇರಿಮಠದ ಶಿವಕುಮಾರ ಮಹಾಸ್ವಾಮಿಗಳು ವಹಿಸುವರು. ಪುಸ್ತಕ ಬಿಡುಗಡೆಯನ್ನು ಆಕಾಶವಾಣಿ ಧಾರವಾಡ ಕೇಂದ್ರದ ಬಸು ಬೇವಿನಗಿಡದ ಮಾಡುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಶಂಕರ ಹಲಗತ್ತಿ ಪಾಲ್ಗೊಳ್ಳುವರು. ಗೌರವ ಉಪಸ್ಥಿತಿ ರವಿ ದೇವರಡ್ಡಿ, ಪುಸ್ತಕಾವಲೋಕನವನ್ನು ಮಕ್ಕಳ ಸಾಹಿತಿಗಳಾದ ನಾಗರಾಜ ಹುಡೇದ ಮಾಡುವರು. ಸೌಮ್ಯ ಪ.ಬೈಲಪ್ಪನವರ ನಿರ್ವಹಿಸಲಿದ್ದು, ಕವಿ, ರಂಗ ನಟ, ಸಂತೋಷ ಅಂಗಡಿ ಪ್ರಾಸ್ತಾವಿಕವಾಗಿ ಮಾತನಾಡುವರು. ನೇತ್ರಾ ಮ.ಬಂಡಿ ಪ್ರಾರ್ಥಿಸುವರು.

ಕಸಾಪದ ಪದಾಧಿಕಾರಿಗಳು, ಸಾಕ್ಷಿಯ ಕುಟುಂದ ಸದಸ್ಯರು, ಗದಗ ಜಿಲ್ಲೆಯ ಸಾಹಿತಿಗಳು, ಸಾಹಿತ್ಯ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಗದಗ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಹಾಗೂ ತಾರಾಲಯ ಸೊಸೈಟಿ ವತಿಯಿಂದ ಗದಗ ಬೆಟಗೇರಿ ಅವಳಿ ನಗರದಲ್ಲಿ ಸ್ಥಾಪಿಸಲಾಗಿರುವ 3ಡಿ ಡಿಜಿಟಲ್ ತಾರಾಲಯ ಮತ್ತು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಅಗತ್ಯವಿರುವ ಕ್ಯುರೇಟರ್ (ಮೇಲ್ವಿಚಾರಕರು)-1, ಎಜ್ಯುಕೇಶನ್ ಅಸಿಸ್ಟಂಟ್ (ಶಿಕ್ಷಣ ಸಹಾಯಕರು)-1, ಟೆಕ್ನಿಕಲ್ ಅಸಿಸ್ಟಂಟ್ ( ತಾಂತ್ರಿಕ ಸಹಾಯಕರು)-1, ಟೆಕ್ನಿಷಿಯನ್ (ತಂತ್ರಜ್ಞರು)-1 ಒಟ್ಟು 4 ಹುದ್ದೆಗಳನ್ನು ಗುತ್ತಿಗೆ ನಿಯಮಾವಳಿಗಳನ್ವಯ ನೇಮಕ ಮಾಡಿಕೊಳ್ಳಲು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಅನುಮೋದನೆ ನೀಡಿದಂತೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತವುಳ್ಳ ಅಭ್ಯರ್ಥಿಗಳು ಜಿಲ್ಲಾಧಿಕಾರಿಗಳ ಕಾರ್ಯಾಲಯ, ಗದಗ ವೆಬ್‌ಸೈಟ್ gadag.nic.in ನಲ್ಲಿ ಹಾಗೂ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಿದ ಅರ್ಜಿ ನಮೂನೆಯನ್ನು ಪಡೆದು ಅರ್ಜಿಯೊಂದಿಗೆ ಬಯೋಡೆಟಾ, ಶೈಕ್ಷಣಿಕ ಹಾಗೂ ಅನುಭವ ಪ್ರಮಾಣ ಪತ್ರಗಳ ನಕಲು ಪ್ರತಿಗಳನ್ನು ದೃಢೀಕರಣದೊಂದಿಗೆ ಫೆಬ್ರವರಿ 21 ರೊಳಗಾಗಿ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಕೊಠಡಿ ಸಂಖ್ಯೆ 123, 1ನೇ ಮಹಡಿ, ಜಿಲ್ಲಾಡಳಿತ ಭವನ, ಗದಗ ಈ ಕಾರ್ಯಾಲಯಕ್ಕೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಯೋಜನಾ ನಿರ್ದೇಶಕರ ಕಾರ್ಯಾಲಯ, ಜಿಲ್ಲಾ ನಗರಾಭಿವೃದ್ಧಿ ಕೋಶ, ಕೊಠಡಿ ಸಂಖ್ಯೆ 123, ಜಿಲ್ಲಾಡಳಿತ ಭವನ ಗದಗ ದೂರವಾಣಿ ಸಂಖ್ಯೆ 08372- 231877 ಸಂಪರ್ಕಿಸಬಹುದಾಗಿದೆ.

# ಪರಿಸರ ಪ್ರವಾಸೋದ್ಯಮಕ್ಕೆ ಉತ್ತೇಜನ

■ ವಿಜಯಸಾಕ್ಷಿ ಸುದ್ದಿ, ಗದಗ



ಪಂಚಲೋಹಗಳ ಬೀಡು, ಔಷಧೀಯ ಸಸ್ಯ ಕಾಶಿ ಕಪ್ಪತ್ತಗುಡ್ಡದ ಪರಿಸರ ಪ್ರವಾಸೋದ್ಯಮಕ್ಕೆ ರಾಜ್ಯ ಬಜೆಟ್‌ನಲ್ಲಿ ಉತ್ತೇಜನ ನೀಡಲಾಗುವುದು ಎಂದು ಘೋಷಿಸಿರುವದು ಸ್ವಾಗತಾರ್ಹವಾಗಿದೆ ಎಂದು ಜಂತಲಿ ಶಿರೂರಿನ ಜನಪದ ಕಲಾವಿದ ಗವಿಶಿದ್ಧಯ್ಯ ಹಳ್ಳಿಕೇರಿಮಠ ಸ್ವಾಗತಿಸಿದ್ದಾರೆ.

ಪರಿಸರ ಬೆಳೆದರೆ ನಾಡು ಉಳಿದೀತು. ಈ ನಿಟ್ಟಿನಲ್ಲಿ ಸರಕಾರದ ನಿರ್ಧಾರ ಅಭಿನಂದನೀಯ. ಸ್ಕಂದ ಪುರಾಣದಲ್ಲಿ ಎಪ್ಪತ್ತುಗಿರಿಗಿಂತ ಕಪ್ಪತ್ತಗಿರಿ ಮೇಲು ಎಂದು ಸಾರಲಾಗಿದೆ. ಉತ್ತರ ಕರ್ನಾಟಕದ ಸಹ್ಯಾದ್ರಿ, ವನ್ಯ ಜೀವಿಗಳ ತಾಣ ಹಾಗೂ ಶುದ್ಧ ಗಾಳಿ ಬೀಸುವ ಪ್ರದೇಶವೆಂಬ ಖ್ಯಾತಿ ಗಳಿಸಿರುವ ಕಪ್ಪತ್ತಗುಡ್ಡದ ಪ್ರವಾಸೋದ್ಯಮ ಅಭಿವೃದ್ಧಿಗೆ ಹಸಿರು ನಿಶಾನೆ ತೋರಿರುವ ಬಜೆಟ್ ಪರಿಸರ ಕಾಳಜಿ ಮೆರದಿದೆ ಎಂದಿದ್ದಾರೆ.

# ಫೆ. 26, 27 ರಂದು ಬೆಂಗಳೂರಿನಲ್ಲಿ ಬೃಹತ್ ಉದ್ಯೋಗ ಮೇಳ

■ ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, (ಕೆ.ಎಸ್.ಡಿ.ಸಿ.,) ಬೆಂಗಳೂರು ವತಿಯಿಂದ ರಾಜ್ಯ ಮಟ್ಟದ ಯುವ ಸಮೃದ್ಧಿ ಸಮ್ಮೇಳನ ಬೃಹತ್ ಉದ್ಯೋಗ ಮೇಳ-2024ನ್ನು ಫೆಬ್ರವರಿ 26 ಮತ್ತು 27 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದೆ.

ಈ ಬೃಹತ್ ಉದ್ಯೋಗ ಮೇಳದಲ್ಲಿ ಎಲ್ಲಾ ವಿದ್ಯಾರ್ಹತೆಯ ಉದ್ಯೋಗಾಕಾಂಕ್ಷಿಗಳು ಭಾಗವಹಿಸಬಹುದಾಗಿದೆ. ಉದ್ಯೋಗಾಕಾಂಕ್ಷಿಗಳು ಹಾಗೂ ಉದ್ಯೋಗದಾತರು ಭಾಗವಹಿಸಲು https://skillconnect.kaushalkar.com ವೆಬ್‌ಸೈಟನಲ್ಲಿ ನೋಂದಾಯಿಸಿಕೊಳ್ಳತಕ್ಕದ್ದು. ಸಹಾಯವಾಣಿ ಸಂಖ್ಯೆ, 18005999918 ಹೆಚ್ಚಿನ ಮಾಹಿತಿಗಾಗಿ ಶಿವಾನಂದ ಕಂಬಾರ ಮೊ:9916185682 & ಕಾರ್ತಿಕ್ ಎನ್. ಶಿಗ್ಗಿಮಠ, ಮೊ:9380985123 ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಕೌಶಲ್ಯ ಮಿಷನದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರ ಏಳಿಗೆಗೆ ಯೋಜನೆಯಿಲ್ಲ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಸಿಎಂ ಸಿದ್ಧರಾಮಯ್ಯನವರ ಬಜೆಟ್‌ನಲ್ಲಿ ಅನ್ನದಾತ ರೈತರನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗಿದೆ ಎಂದು ಶಿರಹಟ್ಟಿ ಮತಕ್ಷೇತ್ರದ ಜೆಡಿಎಸ್ ಮುಖಂಡ ಶಂಕರ ಬಾಳಿಕಾಯಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅತಿವೃಷ್ಟಿ-ಅನಾವೃಷ್ಟಿಯಿಂದ ಸಂಕಷ್ಟದ ಸುಳಿಯಲ್ಲಿ ಸಿಲುಕಿರುವ ರೈತರ ಏಳಿಗೆಗಾಗಿ ಬಜೆಟ್‌ನಲ್ಲಿ ಯಾವುದೇ ಪೂರಕ ಅಂಶಗಳಿಲ್ಲ. ಗ್ಯಾರಂಟಿ ಯೋಜನೆ ಅನುಷ್ಠಾನಕ್ಕಾಗಿ ಎಲ್ಲ ಹಂತದಲ್ಲೂ ತೆರಿಗೆ ಹೊರೆ ಮತ್ತು ಬೆಲೆ ಏರಿಕೆ ಮಾಡಲಾಗಿದೆ. ಮೂಲಸೌಲಭ್ಯಕ್ಕೆ ಆದ್ಯತೆಯಿಲ್ಲದ ಪೊಳ್ಳು ಬಜೆಟ್ ಇದಾಗಿದೆ. ಪ್ರಭಾವಿ ಸಚಿವರಿದ್ದರೂ ಗದಗ ಜಿಲ್ಲೆಗೆ ಬಜೆಟ್‌ನಲ್ಲಿ ಅನ್ಯಾಯವಾಗಿದೆ ಎಂದು ಅವರು ತಿಳಿಸಿದ್ದಾರೆ.

## ಕನ್ನಡಿಗನ ಮೇಲೆ ಸಾಲದ ಬಜೆಟ್

■ ವಿಜಯಸಾಕ್ಷಿ ಸುದ್ದಿ, ಗದಗ



ಈ ಶತಮಾನದ ನಕಲಿ ಅರ್ಥಶಾಸ್ತ್ರಜ್ಞ, ಸಿಎಂ ಸಿದ್ದರಾಮಯ್ಯನವರು ಈ ಬಾರಿಯ ಬಜೆಟ್ ಮೂಲಕ ಕರ್ನಾಟಕವನ್ನು ಸಾಲದ ರಾಜ್ಯವನ್ನಾಗಿ ಪರಿವರ್ತಿಸಿದ್ದಾರೆ ಎಂದು ಬಿಜೆಪಿ ಗದಗ ನಗರ ಮಂಡಲಾಧ್ಯಕ್ಷ ಅನಿಲ ಅಬ್ಬಿಗೇರಿ ಕುಹಕವಾಡಿದ್ದಾರೆ.

ಅಧಿಕಾರಕ್ಕೆ ಬಂದು ಕೇವಲ 9 ತಿಂಗಳಲ್ಲಿ ಸಾಲದ ಹೊರೆಯನ್ನು ಹೆಚ್ಚಿಸುತ್ತಲೇ ಇದ್ದಾರೆ. ಇದೀಗ ಪ್ರತಿಯೊಬ್ಬ ಕನ್ನಡಿಗನ ತಲೆಯ ಮೇಲೆ 28 ಸಾವಿರ ರೂ ಸಾಲ ಹೇರಿದ್ದಾರೆ. ಒಂದು ಸಮುದಾಯದ ತುಷ್ಟೀಕರಣಕ್ಕಾಗಿ ಲಕ್ಷಾಂತರ ಕೋಟಿ ರೂ ಸಾಲ ಮಾಡಿ ಸಂಪೂರ್ಣವಾಗಿ ಕನ್ನಡಿಗರನ್ನು ಮುಳುಗಿಸಿದ್ದಾರೆ. ಸಾಲದ ಸುಳಿಗೆ ಕರುನಾಡು ಸಿಲುಕಿದೆ. ಅಭಿವೃದ್ಧಿಯಲ್ಲಿ 20 ವರ್ಷ ಹಿಂದೆ ಬಿದ್ದಿರುವ ರಾಜ್ಯ ಕರ್ನಾಟಕವಾಗಿದೆ. ಮಾನ್ಯ ಸಿದ್ದರಾಮಯ್ಯನವರ ಕಾಂಗ್ರೆಸ್ ಆಡಳಿತದಿಂದ ಆರ್ಥಿಕತೆ ಸಂಪೂರ್ಣವಾಗಿ ಹಳ್ಳ ಹಿಡಿದಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

### ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ

# ಬರನಿರ್ವಹಣೆಯನ್ನು ಸಮರ್ಪಕವಾಗಿ ನಿಭಾಯಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ಜಾನುವಾರು ಮೇವಿನ ಸ್ಥಿತಿಗತಿಯ ಜೊತೆಗೆ ಬರನಿರ್ವಹಣೆಯನ್ನು ಸಮರ್ಪಕವಾಗಿ ಯಾವುದೇ ತೊಂದರೆಯಾಗದಂತೆ ನಿರ್ವಹಿಸಲು ಜಿಲ್ಲಾಧಿಕಾರಿ ವೈಶಾಲಿ. ಎಂ.ಎಲ್.ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರದಂದು ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು, ಮೇವಿನ ಸ್ಥಿತಿಗತಿ ಮತ್ತು ಬರನಿರ್ವಹಣೆ ಸಂಬಂಧಿಸಿದಂತೆ ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಅಧಿಕಾರಿ ವರ್ಗ ಕಾರ್ಯನಿರ್ವಹಿಸಬೇಕು. ಕುಡಿಯುವ ನೀರಿನ ತೊಂದರೆಗೊಳಗಾದ ಗ್ರಾಮಗಳನ್ನು ಈಗಾಗಲೇ ಗುರುತಿಸಿದ್ದು, ಯಾವುದೇ ಕಾರಣಕ್ಕೂ ಜಿಲ್ಲೆಯ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮ ಜರುಗಿಸಬೇಕೆಂದು ತಿಳಿಸಿದರು.

ಅಗತ್ಯ ಬಿದ್ದಲ್ಲಿ ಉತ್ತಮ ಗುಣಮಟ್ಟದ ನೀರಿರುವ ಖಾಸಗಿ ಬೋರ್‌ವೆಲ್‌ಗಳ ಸಹಾಯದ ಮೂಲಕ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಮತ್ತು ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಮೇವು ಬ್ಯಾಂಕ್‌ಗಳಲ್ಲಿ ಸಮರ್ಪಕ ಹಾಗೂ ಉತ್ತಮ ಗುಣಮಟ್ಟದ ಮೇವಿನ ದಾಸ್ತಾನು ಮಾಡಿಟ್ಟುಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಭೆಯಲ್ಲಿ ಆದೇಶಿಸಿದರು.



> ಪ್ರಸ್ತುತ ಜಲಾಶಯಗಳಲ್ಲಿ ಹಿಂದಿನ ವರ್ಷಕ್ಕಿಂತ ನೀರಿನ ಪ್ರಮಾಣ ಕಡಿಮೆ ಇದ್ದು, ಮುಂದಿನ ದಿನಗಳಲ್ಲಿ ನೀರಿನ ಬೇಡಿಕೆ ಹೆಚ್ಚಾಗುವ ಸಾಧ್ಯತೆಯನ್ನು ಮನಗಂಡು ಈಗ ಹರಿಬಿಡಲಾಗುವ ನೀರನ್ನು ಪೋಲಾಗದಂತೆ ಸಂಗ್ರಹಿಸಿಕೊಂಡು ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಬಳಸಲು ಕ್ರಮ ವಹಿಸಬೇಕು. ಹೆಸ್ಕಾಂ ಅಧಿಕಾರಿಗಳು ನೀರು ಬಿಡುವ ದಿನಗಳಲ್ಲಿ ಕಾಲುವೆ ಗುಂಟ ಅಳವಡಿಸಿರುವ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸುವ ಮೂಲಕ ರೈತರು ಬೆಳೆಗಳಿಗೆ ನೀರು ಬಳಸದಂತೆ ಜಾಗೃತಿ ವಹಿಸಬೇಕು.
>
> – **ವೈಶಾಲಿ.ಎಂ.ಎಲ್**. ಜಿಲ್ಲಾಧಿಕಾರಿಗಳು, ಗದಗ

ತಾಲೂಕಾವಾರು ತಹಸೀಲ್ದಾರರು ಪ್ರತಿ ವಾರಕ್ಕೊಮ್ಮೆ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಗಳನ್ನು ನಡೆಸಿ ಮುಂಜಾಗ್ರತಾ ಕ್ರಮಗಳನ್ನು ವಹಿಸಿದ ಬಗ್ಗೆ ಕಚೇರಿಗೆ ವರದಿ ಸಲ್ಲಿಸುವಂತೆ ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ತುಂಗಭದ್ರಾ ನದಿಗೆ ಜಲಾಶಯದಿಂದ ನೀರು ಬಿಡುಗಡೆಯಾಗುತ್ತಿದೆ. ಕಾಲುವೆಯ ಪಾತ್ರದಲ್ಲಿ ಜಾನುವಾರುಗಳನ್ನು ಬಿಡದಂತೆ ಮುಂಜಾಗ್ರತೆ ಕ್ರಮ ಕೈಗೊಳ್ಳಲು ಸಂಬಂಧಿತ ತಹಸೀಲ್ದಾರರಿಗೆ ಸೂಚನೆ ನೀಡಿದ ಜಿಲ್ಲಾಧಿಕಾರಿಗಳು ನೀರು ಬಿಡುತ್ತಿರುವುದು ಕೇವಲ ಕುಡಿಯುವ ಉದ್ದೇಶಕ್ಕಾಗಿ ಮಾತ್ರ. ಕಾಲುವೆ ಪಾತ್ರದಲ್ಲಿರುವ ರೈತ ಬಾಂದವರು ನೀರನ್ನು ಪಂಪ್‌ಸೆಟ್‌ಗಳ ಮೂಲಕ ನೀರೆತ್ತಿ ಬೆಳೆಗಳಿಗೆ ಹಾಯಿಸಬಾರದು. ಈ ಕುರಿತು ತಹಸೀಲ್ದಾರರು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಧಿಕಾರಿ ಡಾ.ವೆಂಕಟೇಶ್ ನಾಯಕ್, ಕೃಷಿ ಜಂಟಿ ನಿರ್ದೇಶಕಿ ತಾರಾಮಣಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟೆಮನಿ, ಪಶು ಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಹುಲಗಣ್ಣವರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ, ಪಿ.ಆರ್.ಇ.ಡಿ. ಕಾರ್ಯಪಾಲಕ ಅಭಿಯಂತರ ಎಸ್.ಆರ್. ಗೌಡರ, ವಿವಿಧ ತಾಲೂಕಿನ ತಹಸೀಲ್ದಾರಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.



■ ವಿಜಯಸಾಕ್ಷಿ ಸುದ್ದಿ, ಗದಗ

ಶುಕ್ರವಾರ ತಾಲೂಕಿನ ಬಳಗಾನೂರ ಗ್ರಾಮದಲ್ಲಿ ಮೌನಯೋಗಿ ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ 29ನೇ ಪುಣ್ಯ ಸ್ಮರಣೋತ್ಸವ ಜಾತ್ರಾ ಮಹೋತ್ಸವದಲ್ಲಿ ಮಹಾರಥೋತ್ಸವ ಭಕ್ತ ಸಾಗರದ ಮಧ್ಯೆ ಜರುಗಿತು.

## ಚನ್ನವೀರ ಶರಣರು ಪವಾಡ ಪುರುಷರು

▶▶ ಮೊದಲನೇ ಪುಟದಿಂದ

ಅದನ್ನು ಬರಿ ಕಿವಿಯಿಂದ ಕೇಳಿದರೆ ಸಾಲದು. ಸತ್ಸಂಗವನ್ನು ಅನುಭವ ಪಡೆದು, ಅನುಷ್ಠಾನಕ್ಕೆ ತರಬೇಕು. ದೇಹ ಹಾಗೂ ಮನಸ್ಸನ್ನು ಅರ್ಥ ಮಾಡಿಕೊಳ್ಳದವರು ಜೀವನದಲ್ಲಿ ಏನೂ ಅರ್ಥ ಮಾಡಿಕೊಳ್ಳವದಿಲ್ಲ. ಮಠಾದೀಶರಾದಿಯಾಗಿ ಎಲ್ಲರೂ ಗೃಹಸ್ಥಾಶ್ರಮದಿಂದ ಬಂದವರಾಗಿದ್ದಾರೆ ಎಂದು ಹೇಳಿದರು.

ವೇದಿಕೆ ಮೇಲೆ ಬಳಗಾನೂರಿನ ಶಿವಶಾಂತವೀರ ಶರಣರು, ಹೊಸಳ್ಳಿಯ ಪೂಜ್ಯಶ್ರೀ ಅಭಿನವ ಬೂದೀಶ್ವರ ಶ್ರೀಗಳು, ಕುಂದಗೋಳ ಕಲ್ಯಾಣಮಠದ ಪೂಜ್ಯಶ್ರೀ ಅಭಿನವ ಬಸವಣ್ಣನವರು, ಯುವ ಮುಖಂಡ ಉಮೇಶಗೌಡ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ 42 ಜೋಡಿಗಳು ನವ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಕಾರಟಗಿಯ ಕುಮಾರ ಸಂಜಯ ಜೆ.ಸಿ. ಹಾಗೂ ಬಳ್ಳಾರಿಯ ದಿ ಎಸ್.ಕೆ.ಆರ್ ಜಿಲಾನಿ ಭಾ ಷಾ ಅವರಿಗೆ 'ಶರಣಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು. ನಂತರ ಭಕ್ತರಿಂದ ಶಿವಶಾಂತವೀರ ಶರಣರಿಗೆ ತುಲಾಭಾರ ಸೇವೆ, ರಕ್ತದಾನ ಶಿಬಿರ ಜರುಗಿದವು. ಬೆಂಗಳೂರಿನ ಮಹೇಶಕುಮಾರ ಹೇರೂರ ಸಂಗೀತ ಕಾರ್ಯಕ್ರಮ ನೀಡಿದರು. ಶಿವಲಿಂಗಯ್ಯಶಾಸ್ತ್ರಿ ಹಿರೇಮಠ ಸಿದ್ದಾಪೂರ ಕಾರ್ಯಕ್ರಮ ನಿರೂಪಿಸಿದರು. ಬಿ.ವೈ. ಡೊಳ್ಳಿನ ವಂದಿಸಿದರು.

### 'ಇತಿಹಾಸ ಅಧ್ಯಯನದ ಪ್ರಾಮುಖ್ಯತೆ ಮತ್ತು ಬರವಣಿಗೆ ಕಲೆ' ಕುರಿತು ಕಾರ್ಯಾಗಾರ

# ಇತಿಹಾಸ ಅಧ್ಯಯನದಿಂದ ಸಾರ್ವಕಾಲಿಕ ಜ್ಞಾನ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜಶಾಸ್ತ್ರ, ಧರ್ಮಶಾಸ್ತ್ರ, ಸಮಾಜಶಾಸ್ತ್ರ, ತತ್ವಶಾಸ್ತ್ರ, ವಿಜ್ಞಾನ, ವಾಣಿಜ್ಯ, ವೈದ್ಯಕೀಯ, ತಂತ್ರಜ್ಞಾನ ಮುಂತಾದ ಎಲ್ಲ ಜ್ಞಾನ ಶಾಖೆಗಳ ಪ್ರಾಚೀನತೆ, ಬೆಳವಣಿಗೆ, ಸ್ವರೂಪ, ವ್ಯಾಪ್ತಿ ಇತ್ಯಾದಿ ಆಯಾಮಗಳ ಪರಿಚಯಕ್ಕೆ ಇತಿಹಾಸ ವಿಷಯ ಮೂಲವಾಗಿದ್ದು, ಇತಿಹಾಸ ಅಧ್ಯಯನದಿಂದ ಸಂಪಾದಿಸುವ ಜ್ಞಾನ ಸಾರ್ವಕಾಲಿಕವಾಗಿದೆ. ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ವಸ್ತುನಿಷ್ಠವಾಗಿ ರಚಿಸಿರುವ ಇತಿಹಾಸ ಸಂಶೋಧನ ಕೃತಿಗಳ ಅಧ್ಯಯನದಿಂದ ಮಾತ್ರ ಇತಿಹಾಸವನ್ನು ಅರ್ಥಪೂರ್ಣವಾಗಿ ಮನದಟ್ಟು ಮಾಡಿಕೊಳ್ಳಬಹುದು ಎಂದು ಕುರ್ತಕೋಟಿಯ ಸರ್ಕಾರಿ ಪದವಿಪೂರ್ವ ಕಾಲೇಜಿನ ಇತಿಹಾಸ ಉಪನ್ಯಾಸಕ ಡಾ. ವಾಯ್.ಆರ್. ಬೇಲೇರಿ ಹೇಳಿದರು.

ಅವರು ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸ.ಪ್ರ.ದ ಕಾಲೇಜಿನ ಇತಿಹಾಸ ವಿಭಾಗ ಆಯೋಜಿಸಿದ್ದ 'ಇತಿಹಾಸ ಅಧ್ಯಯನದ ಪ್ರಾಮುಖ್ಯತೆ ಮತ್ತು ಬರವಣಿಗೆ ಕಲೆ' ಕುರಿತಾದ ಒಂದು ದಿನದ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ 'ಇತಿಹಾಸ ಅಧ್ಯಯನದ ಪ್ರಾಮುಖ್ಯತೆ' ಕುರಿತು ಮಾತನಾಡಿದರು.

ಸಂಪನ್ಮೂಲ ವ್ಯಕ್ತಿ ಅಣ್ಣಿಗೇರಿಯ ಸ.ಪ್ರ.ದ ಕಾಲೇಜಿನ ಪ್ರಾಂಶುಪಾಲ ಮತ್ತು ಕನ್ನಡ ಪ್ರಾಧ್ಯಾಪಕ ಡಾ. ಬಿ.ಎಚ್. ಬುಳ್ಳಣ್ಣವರ 'ಇತಿಹಾಸ ಬರವಣಿಗೆ ಕಲೆ' ಕುರಿತು ಮಾತನಾಡುತ್ತ, ವಿದ್ಯಾರ್ಥಿಗಳು ಇತಿಹಾಸವನ್ನು ಆಸಕ್ತಿ, ಕುತೂಹಲ, ಶ್ರದ್ಧೆಯಿಂದ ಅಧ್ಯಯನ ಮಾಡಿದರೆ ಮಾತ್ರ ಅದನ್ನು ಬರೆಯುವ ಕಲೆ ಸಿದ್ಧಿಸುತ್ತದೆ. ಪ್ರಶ್ನೆ ಪತ್ರಿಕೆಯನ್ನು ಗಮನವಿಟ್ಟು ಓದಿ, ಪ್ರಶ್ನೆಯಲ್ಲಿ ಕೇಳಿದ ವಿವರಿಸಿರಿ, ವಿಮರ್ಶಿಸಿರಿ, ಪರಿಶೀಲಿಸಿರಿ, ಅವಲೋಕಿಸಿರಿ, ಬರೆಯಿರಿ ಮುಂತಾದ ಪದಗಳನ್ನು ಅರ್ಥಮಾಡಿಕೊಂಡು ಇವುಗಳಿಗೆ ಅನುಗುಣವಾಗಿ ಉತ್ತರಗಳನ್ನು ಪೀಠಿಕೆ, ವಿಷಯ, ಸಮಾರೋಪ ಕ್ರಮದಲ್ಲಿ ಬರೆದರೆ ಮಾತ್ರ ಹೆಚ್ಚು ಅಂಕಗಳನ್ನು ಸಂಪಾದಿಸಲು ಸಾಧ್ಯವೆಂದು ಉದಾಹರಣೆಗಳ ಮೂಲಕ ವಿದ್ಯಾರ್ಥಿಗಳ ಗಮನ ಸೆಳೆದರು.

ಉಪನ್ಯಾಸಕ ಪ್ರೊ. ಬಸವಂತಪ್ಪ ದೊಡ್ಡಮನಿ ಸ್ವಾಗತಿಸಿದರು. ಪ್ರೊ. ನವೀನ ತೀರ್ಲಾಪುರ ನಿರೂಪಣೆ ಮಾಡಿದರು. ಪ್ರಾಧ್ಯಾಪಕ ಡಾ. ಪ್ರಬಲ ರೊಡ್ಡಣ್ಣವರ ವಂದನಾರ್ಪಣೆಗೈದರು. ಕಾರ್ಯಾಗಾರದಲ್ಲಿ ಇತಿಹಾಸ ವಿಷಯದ ಎಲ್ಲ ಸೆಮಿಸ್ಟರ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ಅಪ್ಪಣ್ಣ ಹಂಜೆ ಕಾರ್ಯಾಗಾರದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡುತ್ತ, ಪ್ರಶ್ನೆ ಪತ್ರಿಕೆಗಳ ಸ್ವರೂಪ, ಸಮಯ ನಿಗದಿಪಡಿಸಿಕೊಳ್ಳುವ ಕ್ರಮ, ಬರವಣಿಗೆ ಶೈಲಿಯನ್ನು ಪರಿಚಯಿಸಿದರು. ಪ್ರಾಂಶುಪಾಲ ಡಾ. ಶಿವಪ್ಪ ಕುರಿ ಅಧ್ಯಕ್ಷೀಯ ನುಡಿಗಳನ್ನಾಡಿ, ವಿದ್ಯಾರ್ಥಿಗಳು ಪ್ರತಿಯೊಂದು ವಿಷಯವನ್ನು ಪರಿಶ್ರಮ, ಶ್ರದ್ಧೆಯಿಂದ ಓದುವುದರ ಜೊತೆಗೆ ಓದಿದ್ದನ್ನು ಪುನರ್ಮನನ ಮಾಡಿಕೊಳ್ಳುವುದನ್ನು ರೂಢಿಸಿಕೊಂಡರೆ ಓದು ಸಾರ್ಥಕವಾಗುತ್ತದೆ ಎಂದು ಹೇಳಿದರು.

## ಫೆ.19 ರಂದು ಶಿವಾಜಿ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರ ಸಹಯೋಗದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಫೆಬ್ರವರಿ 19ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು.

ಸಹಕಾರ ರೇಡಿಯೋ ನಿಲಯ ನಿರ್ದೇಶಕರಾದ ಜೆ.ಕೆ. ಜಮಾದಾರ ಅವರು ಛತ್ರಪತಿ ಶಿವಾಜಿ ಮಹಾರಾಜರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡುವರು. ಮರಾಠಾ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ವಿನಿತಕುಮಾರ್ ವಿ ಜಗತಾಪ, ಜಿಲ್ಲಾ ಕ್ಷತ್ರಿಯ ಮಹಾಸಭಾ ಅಧ್ಯಕ್ಷರಾದ ಶ್ರೀಕಾಂತ ಖಟವಟೆ, ಮರಾಠಾ ಸಮಾಜದ ಗಣ್ಯರಾದ ಮೋಹನರಾವ್ ಗ್ವಾರಿ, ರಾಜಮಾತಾ ಜೀಜಾಬಾಯಿ, ಮಹಿಳಾ ಮಂಡಳದ ಅಧ್ಯಕ್ಷರಾದ ಶ್ರೀಮತಿ ಶೃತಿ ಗ್ವಾರಿ ಆಮಂತ್ರಿತರಾಗಿ ಆಗಮಿಸುವರು.

ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರಯ್ಯ ಸ್ವಾಮಿ ಬಿ. ವಿಶೇಷ ಆಹ್ವಾನಿತರಾಗಿ ಆಗಮಿಸುವರು.

### ತಂಬಾಕು ನಿಯಂತ್ರಣ ಕೊಟ್ಪಾ ಕಾಯ್ದೆ-2003 ಕುರಿತು ತರಬೇತಿ ಕಾರ್ಯಾಗಾರ

# ಕೋಟ್ಪಾ ಅನುಷ್ಠಾನಕ್ಕೆ ಪೊಲೀಸ್ ಇಲಾಖೆ ಸಿದ್ಧ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ತಂಬಾಕು ವ್ಯಸನದಿಂದಾಗುವ ದುಷ್ಪರಿಣಾಮ ಕೋಟ್ಪಾ ಕಾಯ್ದೆ-2003, ತಂಬಾಕು ಮುಕ್ತ ಶಿಕ್ಷಣ ಸಂಸ್ಥೆ ಹಾಗೂ ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿನ ಸೌಲಭ್ಯಗಳ ಕುರಿತು ಪೊಲೀಸ್ ಇಲಾಖೆಯ ಪೊಲೀಸ್ ಅಧಿಕಾರಿಗಳಿಗೆ ತರಬೇತಿ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಕಾರ್ಯಕ್ರಮ ಉದ್ಘಾಟಿಸಿ ತಂಬಾಕು ಬಳಕೆಯಿಂದ ಪರಿಸರ ಹಾಗೂ ನಮ್ಮ ಸುತ್ತ ಮುತ್ತಲಿನ ಪ್ರದೇಶ ಕಲುಷಿತ ಹಾಗೂ ಅನಾರೋಗ್ಯ ವಾತಾವರಣ ಉಂಟಾಗುತ್ತಿರುವದನ್ನು ತಡೆಗಟ್ಟಲು ಕ್ರಮವಹಿಸಬೇಕೆಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡುತ್ತ, ತಂಬಾಕು ನಿಯಂತ್ರಣ ಕುರಿತು ನಮ್ಮ ಇಲಾಖೆಯ ವತಿಯಿಂದ ವಿವಿಧ ಇಲಾಖೆಯ ಅಧಿಕಾರಿ-ಸಿಬ್ಬಂದಿಗಳಿಗೆ, ಸಂಘ-ಸಂಸ್ಥೆಗಳ ಪದಾಧಿಕಾರಿಗಳಿಗೆ ತರಬೇತಿ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳುವದರ ಮೂಲಕ ಜಿಲ್ಲೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಲಾಗಿದೆ. ಕೋಟ್ಪಾ ಕಾಯ್ದೆ ಅನುಷ್ಠಾನಕ್ಕೆ ಮುಖ್ಯವಾಗಿ ಪೊಲೀಸ್ ಇಲಾಖೆ ಪ್ರಮುಖ ಪಾತ್ರವಹಿಸುತ್ತದೆ ಎಂದರು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ ಮಾತನಾಡಿ, ತಂಬಾಕು ಸೇವನೆಯಿಂದ ಕ್ಯಾನ್ಸರ್‌ನಂತಹ ಭಯಾನಕ ಖಾಯಿಲೆಗಳು, ಅಸಾಂಕ್ರಾಮಿಕ ಕಾಯಿಲೆಗಳು ಹೆಚ್ಚುತ್ತಿದ್ದು, ಕ್ಯಾನ್ಸರ್ ಪ್ರಾರಂಭಿಕ ಹಂತದಲ್ಲಿ ಪತ್ತೆ ಹಚ್ಚಿ ಶೀಘ್ರ ಚಿಕಿತ್ಸೆ ಪಡೆಯಲು ತಿಳಿಸಿದರಲ್ಲದೆ, ಜಿಲ್ಲಾ ವ್ಯಸನಮುಕ್ತ ಕೇಂದ್ರದಲ್ಲಿ ಲಭ್ಯವಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಉಪ ಪೊಲೀಸ್ ಅಧೀಕ್ಷಕ ಜೆ.ಎಚ್. ಇನಾಮದಾರ ಮಾತನಾಡಿ, ತಂಬಾಕು ನಿಯಂತ್ರಣ ಕುರಿತು ಜಾಗೃತಿ ಕಾರ್ಯಕ್ರಮ ಸೇರಿದಂತೆ ಇನ್ನಿತರ ಚಟುವಟಿಕೆಗಳನ್ನು ಹಮ್ಮಿಕೊಳ್ಳುವಲ್ಲಿ, ಕೋಟ್ಪಾ ಕಾಯ್ದೆ ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಲ್ಲಿ ಇಲಾಖೆಯ ಸಹಕಾರ ಸದಾ ಇರುವದಾಗಿ ತಿಳಿಸಿದರು.

ಜಿಮ್ಸ್ ಸಹ ಪ್ರಾಧ್ಯಾಪಕ ಡಾ.ಅರವಿಂದ ಕರಿನಾಗಣ್ಣವರ್ ಮಾತನಾಡಿ, ತಂಬಾಕಿನಲ್ಲಿರುವ ನಿಕೋಟಿನ್ ಅಂಶ ದೇಹದಲ್ಲಿ ಸೇರಿ ನರಮಂಡಲದ ಕಾರ್ಯದ ಮೇಲೆ ಪರಿಣಾಮ ಬೀರಿ, ರಕ್ತ ಹಾಗೂ ಆಕ್ಸಿಜನ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. ತಂಬಾಕು ತ್ಯಜಿಸಲು ನಮ್ಮ ಜೀವನ ಶೈಲಿಯಲ್ಲಿ ಕೈಗೊಳ್ಳಬೇಕಾದ ಬದಲಾವಣೆಗಳ ಕುರಿತು ಪರಿಣಾಮಕಾರಿ ತಿಳಿಸಿದರು.

ಎನ್.ಟಿ.ಸಿ.ಪಿ. ಜಿಲ್ಲಾ ಸಲಹೆಗಾರ ಗೋಪಾಲ ಸುರಪುರ ಮಾತನಾಡಿ, ತಂಬಾಕು ನಿಯಂತ್ರಣ ಕಾಯ್ದೆ ಕೋಟ್ಪಾ-2003 ಕುರಿತು ಮಾತನಾಡುತ್ತಾ, ತಂಬಾಕು ಬಳಕೆ ಹಾಗೂ ಮಾರಾಟ ಕೋಟ್ಪಾ ಕಾಯ್ದೆಯಡಿ ಮಾಡಲು ಸೆಕ್ಷನ್ 4 ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ, ಸೆಕ್ಷನ್ 5 ತಂಬಾಕು ಉತ್ಪನ್ನಗಳ ನೇರ/ಪರೋಕ್ಷ ಜಾಹಿರಾತು ನಿಷೇಧ, ಸೆಕ್ಷನ್ 6ಎ 18 ವರ್ಷದೊಳಗಿನವರಿಗೆ ನಿಷೇಧ, 6ಬಿ ಶಿಕ್ಷಣ ಸಂಸ್ಥೆಗಳ ಆವರಣದಿಂದ 100 ಗಜದ ವರೆಗೆ ತಂಬಾಕು ನಿಷೇಧ, ಸೆಕ್ಷನ್ 7 ತಂಬಾಕು ಉತ್ಪನ್ನಗಳ ಪ್ಯಾಕ್ ಮೇಲೆ ಆರೋಗ್ಯ ಎಚ್ಚರಿಕೆ ಚಿಹ್ನೆ ಕಡ್ಡಾಯ ಎಂದು ವಿವರಿಸಿದರು.

ಎಸ್.ಎಸ್. ಪೀರಾ ಕಾರ್ಯಕ್ರಮ ನಿರೂಪಿಸಿರು. ಯಮುನಾ ಪ್ರಾರ್ಥಿಸಿದರು. ವಿಠ್ಠಲ್ ನಾಯ್ಕ ಸ್ವಾಗತಿಸಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್. ರಬ್ಬನಗೌಡರ ವಂದಿಸಿದರು. ಕಾರ್ಯಕ್ರಮದಲ್ಲಿ ವೃತ್ತ ಪೊಲೀಸ್ ನಿರೀಕ್ಷಕರಾದ ಬಿ.ಎ. ಜಾದವ, ಶಿವಕುಮಾರ ಬಗಾಡೆ, ಫೈಯಾಜ ಎಂ, ಜಿಲ್ಲಾ ಸಮೀಕ್ಷಾ ಘಟಕದ ಸಿಬ್ಬಂದಿಗಳು, ಆರ್.ಡಿ.ಪಿ.ಆರ್ ವಿದ್ಯಾರ್ಥಿಗಳಾದ ಪವಿತ್ರ, ಸಿದ್ದು. ಎಸ್, ಯಮುನಾ ಹಾಜರಿದ್ದರು.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 17 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 22 ಈಶ್ವರ ಗುಡಿ ಲೈನ್, ಗಿರಣಿ ಲೈನ್, ದಖನಿಯವರ ಲೈನ್, ಮೇದಾರ ಅವರ ಲೈನ್, ಧಾರವಾಡದವರ ಲೈನ್. ವಾರ್ಡ್ ನಂ. 3 ಕುಂಬಾರ ಓಣಿ, ಹೊಸಪೇಟೆ ಚೌಕ್, ಮಿಷನ್ ಕಾಂಪೌಂಡ್, ಬಣ್ಣದ ನಗರ, ಪಿ ಬಿ ರೋಡ್ ಉಳಿದ ಭಾಗಗಳು.

ವಾರ್ಡ್ ನಂ. 23, 24 ಕಗನಳ್ಳಿ ಆರೋಗೇರಿ 2 ಭಾಗಗಳು, ಹೆಬಸೂರ ಅವರ ಲೈನ್, 2 ಭಾಗ, ಸೋಮನಗೌಡ್ರ ಲೈನ್, ಕಮತರ ಲೈನ್, ಕಾಳಮ್ಮ ಲೈನ್, ಹನುಮನ ಗರಡಿ, ದ್ರೌಪತಿ ಬಾಯಿ, ಗಣಪತಿ ಗುಡಿ. ವಾರ್ಡ್ ನಂ. 34, 35 ಶಿದ್ದು ಪಾಟೀಲರ ಲೈನ್, ದೊಡ್ಡಮನಿ ಸರ್, ಆದರ್ಶ ನಗರ 1ನೇ ಕ್ರಾಸ್, ಚಿದಾನಂದ ಮಠದ ಹಿಂದಿನ ಭಾಗ, ವೇರ್ಣೇಕರ್ ಲೈನ್. ವಾರ್ಡ್ ನಂ. 15,16,17 ಶಹಾಪುರ್ ಪೇಟೆ, ಜವಳಗಲ್ಲಿ, ಮೀನಿನ ಮಾರ್ಕೆಟ್, ಡಿಸಿ ಮಿಲ್ ರೋಡ್, ಮಹೇಂದ್ರಕರ್ ಸರ್ಕಲ್, ಗಾಂಧಿ ಸರ್ಕಲ್, ಭಜಂತ್ರಿ ಓಣಿ, ಬಸವೇಶ್ವರ ಗುಡಿ ಲೈನ್, ಗಣೇಶ ಗುಡಿ.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ. 19ರಂದು ಜಿಲ್ಲಾ ಅಪ್ರೆಂಟಿರ್‌ಶಿಪ್ ಮೇಳ

■ವಿಜಯಸಾಕ್ಷಿ ಸುದ್ದಿ, ಗದಗ

ಡಿ.ಜಿ.ಟಿ. ನವದೆಹಲಿ ಹಾಗೂ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ ಅಪ್ರೆಂಟಿಸ್‌ಶಿಪ್ ಮೇಳವನ್ನು ಆಯೋಜಿಸಿ ತರಬೇತಿ ಯೋಜನೆಯನ್ನು ಜಾರಿಗೊಳಿಸಲು ನಿರ್ದೇಶಿಸಲಾಗಿದೆ. ಫೆಬ್ರವರಿ 19 ರಂದು ಬೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಅಪ್ರೆಂಟಿರ್‌ಶಿಪ್ ಮೇಳವನ್ನು ಮುಂಡರಗಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ. ಅಪ್ರೆಂಟಿರ್‌ಶಿಪ್ ಮೇಳದಲ್ಲಿ ವಿವಿಧ ಪ್ರತಿಷ್ಠಿತ ಕಂಪನಿಯವರು ಭಾಗವಹಿಸುತ್ತಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಬೇಟಿ ನೀಡಬಹುದಾಗಿದೆ ಅಥವಾ ದೂರವಾಣಿ ಸಂಖ್ಯೆ 9480715898/ 895170462/9620842796 ಸಂಪರ್ಕಿಸಬಹುದಾಗಿದೆ.

### ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಸರಸ್ವತಿ ಪೂಜೆ, ಬೀಳ್ಕೊಡುಗೆ ಕಾರ್ಯಕ್ರಮ

# ಕನಸಿನ ಬೆನ್ನೇರಿದಾಗಲೇ ಗುರಿ ಮುಟ್ಟಲು ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ



ವಿದ್ಯಾರ್ಥಿ ಜೀವನವನ್ನು ಅತ್ಯಂತ ಶಿಸ್ತಿನಿಂದ ಹಾಗೂ ಸ್ಪಷ್ಟ ಗುರಿಯೊಂದಿಗೆ ಕಳೆದರೆ 71 ವಯಸ್ಸಿನವರೆಗೂ ನಮ್ಮನ್ನು ಎಲ್ಲ ರೀತಿಯ ನೆಮ್ಮದಿ, ಗೌರವದಿಂದ ಕಾಯುತ್ತದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅಭಿಪ್ರಾಯಪಟ್ಟರು.

ಅವರು ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಶ್ರೀ ಮಹಾಸರಸ್ವತಿ ಪೂಜಾ ಸಮಾರಂಭ ಹಾಗೂ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿ ಜೀವನ ಸುಂದರ ಬದುಕು ರೂಪಿಸಿಕೊಳ್ಳಲು ಅತ್ಯಂತ ಮಹತ್ವದ ಘಟ್ಟ. ಕೇವಲ ಗೊತ್ತು ಗುರಿಯಿಲ್ಲದೇ ಓದಿದರೆ ಸಾಲದು. ಮಾಜಿ ರಾಷ್ಟ್ರಪತಿ ಅಬ್ದುಲ್ ಕಲಾಂ ಅವರು ಹೇಳಿದಂತೆ ಕನಸು ಕಾಣಲಿಕ್ಕೆ ಖರ್ಚು ಆಗುವುದಿಲ್ಲ. ಕೇವಲ ಕನಸು ಕಾಣಬಾರದು, ಕನಸನ್ನು ಬೆನ್ನು ಹತ್ತಿದಾಗ ಮಾತ್ರ ನಿರ್ದಿಷ್ಟ ಗುರಿ ತಲುಪಲು ಸಾಧ್ಯ. ವಿದ್ಯಾರ್ಥಿ ಜೀವನದಲ್ಲಿ ನನ್ನ ಜಾತಿ ಸರ್ಟಿಫಿಕೇಟ್ ತೆಗೆಸಲು ತಹಸೀಲ್ದಾರ ಕಚೇರಿಗೆ ಹೋದಾಗ ತಹಸೀಲ್ದಾರರು ಎಂಬ ಫಲಕ ನೋಡಿ ನಾನೂ ತಹಸೀಲ್ದಾರ ಆಗಬೇಕೆಂದು ಸಂಕಲ್ಪ ಮಾಡಿದೆ. ಅದು ನನ್ನ ಶಿಸ್ತಿನಿಂದ ಕೊರತೆಗಳ ಮಧ್ಯೆಯೂ ಸಾಧ್ಯವಾಯಿತು ಎಂದು ನೆನಪಿಸಿಕೊಂಡರು.

> ಯಾವುದೇ ಕುಂಟು ನೆಪ ಹೇಳದೇ ಕೊರತೆಗಳನ್ನೇ ದೊಡ್ಡ ಸಮಸ್ಯೆಯನ್ನಾಗಿ ಸೃಷ್ಟಿಸಿಕೊಂಡು ಕನಸು ಕಾಣುವುದನ್ನು ಬಿಡಬೇಡಿ. ನಾನು ಕೂಡ ಸರ್ಕಾರಿ ಶಾಲೆಯ ವಿದ್ಯಾರ್ಥಿನಿ. ಸಾಕಷ್ಟು ಕೊರತೆಗಳ ಮಧ್ಯೆ ಓದಿದ್ದೇನೆ. ಇಂದು ನಿಮಗೆ ಸಭಾಪತಿ ಬಸವರಾಜ ಹೊರಟ್ಟಿಯವರು, ಡಾ.ಬಸವರಾಜ ಧಾರವಾಡ ಅವರು ಈ ಶಾಲೆಗೆ ಸಾಕಷ್ಟು ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ ಒಂದು ಸುಂದರ ವಾತಾವರಣವನ್ನು ನಿರ್ಮಿಸಿದ್ದಾರೆ. ಇದನ್ನು ಸದುಪಯೋಗ ಮಾಡಿಕೊಂಡು ಉನ್ನತ ಮಟ್ಟಕ್ಕೆ ಬರುವಂತೆ ಕನಸು ಕಾಣಿ ಎಂದು ಡಿಸಿ ವೈಶಾಲಿ ಎಂ.ಎಲ್. ಹಾರೈಸಿದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ಮಾತನಾಡಿ, ಒಂದು ಕಾಲಕ್ಕೆ ಸರ್ಕಾರಿ ಶಾಲೆಗಳೆಂದರೆ ಒಂದು ತರಹ ನೋಡುವ ಸ್ಥಿತಿ ಇತ್ತು. ಆದರೆ ಈ ಸರ್ಕಾರಿ ಪ್ರೌಢಶಾಲೆ ಒಂದು ವಿಶೇಷ ಕಳೆಯನ್ನು ಹೊಂದಿದೆ. ನಾನು ಕೂಡಾ ಸರ್ಕಾರಿ ಶಾಲೆಯ ವಿದ್ಯಾರ್ಥಿನಿ. ಕಷ್ಟಪಟ್ಟು, ಇಷ್ಟಪಟ್ಟು ಓದಿದರೆ ಅಸಾಧ್ಯವಾದುದನ್ನು ಸಾಧ್ಯವಾಗಿಸಬಹುದು. ಬಂಗಾರದಂಥಹ ಮುಂದಿನ ಬದುಕನ್ನು ಕಟ್ಟಿಕೊಳ್ಳಲು ವಿದ್ಯಾರ್ಥಿ ಜೀವನ ಅತ್ಯಂತ ಮಹತ್ವದ ಘಟ್ಟ. ನಿಮ್ಮ ಭವಿಷ್ಯವನ್ನು ಉಜ್ವಲವಾಗಿಸಿಕೊಳ್ಳಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಡಾ.ಬಸವರಾಜ ಧಾರವಾಡ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ಪ್ರಭಾರಿ ಮುಖ್ಯೋಪಾಧ್ಯಾಯೆ ಜಯಲಕ್ಷ್ಮೀ ಬಿ.ಅಣ್ಣಿಗೇರಿ ಮಾತನಾಡಿದರು.

ಚುನಾವಣಾ ಕಾರ್ಯದಲ್ಲಿ ರಾಜ್ಯಪ್ರಶಸ್ತಿ ಪಡೆದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರನ್ನು ಹಾಗೂ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ಅವರನ್ನು ಶಾಲೆಯ ಪರವಾಗಿ ಅಭಿನಂದಿಸಿ ಗೌರವಿಸಲಾಯಿತು. ಶಿರುಂದದ ಪ್ರೌಢಶಾಲೆಗೆ ಮುಖ್ಯೋಪಾಧ್ಯಾಯರಾಗಿ ಪದೋನ್ನತಿ ಹೊಂದಿದ ಪಾರ್ವತಿ ವಸ್ತ್ರದ ಅವರನ್ನು ಬೀಳ್ಕೊಟ್ಟು ಗೌರವಿಸಲಾಯಿತು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಗದು ಬಹುಮಾನ, ಪ್ರಶಸ್ತಿ ಪತ್ರ ನೀಡಲಾಯಿತು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ, ನಿವೃತ್ತ ಮುಖ್ಯೋಪಾಧ್ಯಾಯರಾದ ಎಸ್.ಎಸ್. ಮುಳಗುಂದಮಠ, ಪ್ರಭಾರಿ ಮುಖ್ಯೋಪಾಧ್ಯಾಯೆ ಜಯಲಕ್ಷ್ಮೀ ಅಣ್ಣಿಗೇರಿ, ಶಶಿಕಲಾ ಗುಳೆದವರ, ಸರ್ವಮಂಗಳ ಪತ್ತಾರ್, ಮಂಜುಳಾ ಸಾಂಬ್ರಾಣಿ, ಎಸ್.ಬಿ. ಗದ್ದನಗೇರಿ, ಜಿ.ಎನ್. ಅಳವಂಡಿ, ಶಂಕ್ರಮ್ಮ ಹನಮಗೌಡರ, ಶಾರದಾ ಬಾಣದ, ಶೋಭಾ ಗಾಳಿ, ಎಸ್.ಯು. ಕುಷ್ಟಗಿ, ವಿ.ಬಿ. ಶಿವನಗೌಡರ, ನಾಗಪ್ಪ ಶಿರೋಳ, ರಮೇಶ ಬಸರಿ, ಪದ್ಮಾವತಿ ದಾಸರ, ಎಲ್.ಬಿ. ಮಾಳೊತ್ತರ ಸೇರಿದಂತೆ ಶಾಲೆಯ ಎಲ್ಲ ಶಿಕ್ಷಕ ವೃಂದ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸ್ವಾಗತಾರ್ಹ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ 3.71 ಲಕ್ಷ ಕೋಟಿ ರೂಗಳ ಬೃಹತ್ ಮುಂಗಡಪತ್ರದಲ್ಲಿ ಶಿಕ್ಷಣ ಕ್ಷೇತ್ರಕ್ಕೆ 44.422 ಕೋಟಿ ರೂ, ಮಹಿಳಾ ಮತ್ತು ಮಹಿಳಾ ಅಭಿವೃದ್ಧಿ ಇಲಾಖೆಗೆ 34.406 ಕೋಟಿ ರೂ, ಇಂಧನ ಇಲಾಖೆಗೆ 23.159 ಕೋಟಿ ರೂ, ಗ್ರಾಮೀಣ-ಪಂಚಾಯತ್ ಅಭಿವೃದ್ಧಿ ಇಲಾಖೆಗೆ 21.160 ಕೋಟಿ ರೂ, ಗೃಹ ಮತ್ತು ಸಾರಿಗೆ 19.777 ಕೋಟಿ ರೂ, ನೀರಾವರಿ ಇಲಾಖೆಗೆ 19.179 ಕೋಟಿ ರೂ, ನಗರಾಭಿವೃದ್ಧಿಗೆ 18.155 ಕೋಟಿ ರೂ, ಕಂದಾಯಕ್ಕೆ 16.170 ಕೋಟಿ ರೂ, ಆರೋಗ್ಯ ಮತ್ತು ಕುಟುಂಬಕ್ಕೆ 15.145 ಕೋಟಿ ರೂ, ಲೋಕೋಪಯೋಗಿಗೆ 10.424 ಕೋಟಿ ರೂ, ಸಮಾಜ ಕಲ್ಯಾಣಕ್ಕೆ 13.334 ಕೋಟಿ ರೂ ಸೇರಿದಂತೆ ವಕ್ಫ್ ಪ್ರಗತಿಗೆ 100 ಕೋಟಿ ರೂ ಮೀಸಲಿಡುವ ಮೂಲಕ ರಾಜ್ಯದ ಪ್ರಗತಿಗೆ ಹೆಚ್ಚಿನ ಒತ್ತನ್ನ ನೀಡಿರುವುದು ಸ್ವಾಗತಾರ್ಹವಾಗಿದೆ ಎಂದು ಗದಗ-ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷ ಪೀರಸಾಬ ಕೌತಾಳ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಸಮಗ್ರ ಜನಾಂಗದ ಅಭಿವೃದ್ಧಿಯ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಮುಖ್ಯಮಂತ್ರಿ ಸಿದ್ದರಾಮಯ್ಯರು ಮಂಡಿಸಿದ 2024-25ರ ಬಜೆಟ್ ಸಮಸ್ತ ಜನಾಂಗಗಳ ಅಭಿವೃದ್ಧಿಯ ಬಜೆಟ್ ಆಗಿದ್ದು, ಎಲ್ಲಾ ಕ್ಷೇತ್ರಗಳಲ್ಲಿ ಅಭಿವೃದ್ಧಿಯ ಪರವಾಗಿ ಬಜೆಟ್ ಮಂಡನೆ ಆಗಿದೆ ಎಂದು ಕಾಂಗ್ರೆಸ್ ಮುಖಂಡ ಸೈಯದ್ ಖಾಲಿದ್ ಕೊಪ್ಪಳ ಸಂತಸ ವ್ಯಕ್ತಪಡಿಸಿದ್ದಾರೆ.

ರಾಜ್ಯದ ಜನರಿಗೆ 5 ಗ್ಯಾರಂಟಿಗಳನ್ನು ಪೂರೈಸುವ ಮೂಲಕ ಐತಿಹಾಸಿಕ ಬಜೆಟ್ ಮಂಡನೆಯಾಗಿದ್ದು, ರಾಜ್ಯದ ಕಾಂಗ್ರೆಸ್ ಸರ್ಕಾರ ರೈತರ, ಮಹಿಳೆಯರ ಹಾಗೂ ಬಡವರ ಅಭಿವೃದ್ಧಿಯ ಪರವಾಗಿ ಸದಾಕಾಲ ಇದೆ ಎಂದು ಬಜೆಟ್ ಮುಖಾಂತರ ತಿಳಿಸಿದೆ.

ಗದಗ ಜಿಲ್ಲೆಯ ಅಭಿವೃದ್ಧಿಗಾಗಿಯೂ ಬಜೆಟ್‌ನಲ್ಲಿ ಅವಕಾಶ ನೀಡಿದ್ದಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೂ ಅವರು ಅಭಿನಂದನೆ ಸಲ್ಲಿಸಿದ್ದಾರೆ.

## ದೂರದೃಷ್ಟಿಯಿಲ್ಲದ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ಬಜೆಟ್ 202 ರ ಬಗ್ಗೆ ನನಗೆ ತೀವ್ರ ನಿರಾಶೆಯಾಗಿದೆ. ಮತ್ತೊಮ್ಮೆ ಗದಗ ಮತ್ತು ಹಾವೇರಿಯನ್ನು ಕೈಗಾರಿಕಾ ಬೆಳವಣಿಗೆ, ಸುಸ್ಥಿರ ಅಭಿವೃದ್ಧಿ ಮತ್ತು ಮೂಲಸೌಕರ್ಯ ವರ್ಧನೆಯ ವಿಷಯದಲ್ಲಿ ನಿರ್ಲಕ್ಷಿಸಲಾಗಿದೆ. ಸಿಎಂ ಸಿದ್ಧರಾಮಯ್ಯರು ಆದ್ಯತೆ ನೀಡಿದ 'ಬ್ರ್ಯಾಂಡ್ ಬೆಂಗಳೂರು' ಬದಲಾಗಿ 'ಬ್ರ್ಯಾಂಡ್ ಕರ್ನಾಟಕ' ಆಗಬೇಕಾಗಿತ್ತು ಎಂದು ಹುಬ್ಬಳ್ಳಿಯ ಖ್ಯಾತ ವೈದ್ಯ ಡಾ. ಮಹೇಶ ನಾಲವಾಡ ಅಭಿಪ್ರಾಯಪಟ್ಟಿದ್ದಾರೆ.

ಗದಗ ಮತ್ತು ಹಾವೇರಿ ಕರ್ನಾಟಕದ ಮಧ್ಯ ಭಾಗದಲ್ಲಿದ್ದು ಹೇರಳವಾದ ಸಂಪನ್ಮೂಲಗಳ ಹೊರತಾಗಿಯೂ, ಸಾಕಷ್ಟು ಹೂಡಿಕೆ ಮತ್ತು ವ್ಯವಹಾರಗಳಿಗೆ ಪ್ರೋತ್ಸಾಹದ ಕೊರತೆಯಿಂದಾಗಿ ಕೈಗಾರಿಕಾ ಅಭಿವೃದ್ಧಿಗೆ ಬಳಕೆಯಾಗದೆ ಉಳಿದಿವೆ. ಈ ದೂರದೃಷ್ಟಿಕೋನ ಇರದ ಬಜೆಟ್ ಉದ್ಯೋಗಾವಕಾಶ ಮತ್ತು ಆರ್ಥಿಕ ಬೆಳವಣಿಗೆಗೆ ಪೂರಕವಾಗಿಲ್ಲ.

ಗೋವಾ, ಹಂಪಿ ಮತ್ತು ಬಾದಾಮಿಯಂತಹ ತಾಣಗಳಿಗೆ ಸಂಪರ್ಕ ಹೊಂದಿದ್ದರೂ, ಪ್ರವಾಸೋದ್ಯಮದಲ್ಲಿ ಗದಗ ಮತ್ತು ಹಾವೇರಿಯ ಸಾಮರ್ಥ್ಯವನ್ನು ಅನ್ವೇಷಿಸಲಾಗಿಲ್ಲ. ಈ ಪ್ರದೇಶಗಳನ್ನು ರೋಮಾಂಚಕ ಪ್ರವಾಸಿ ತಾಣಗಳಾಗಿ ಅಭಿವೃದ್ಧಿಪಡಿಸಲು ಬಜೆಟ್‌ನಲ್ಲಿ ದೂರದೃಷ್ಟಿ ಇಲ್ಲ.

ನಮ್ಮ ಜಿಲ್ಲೆಗಳ ಯೋಗಕ್ಷೇಮಕ್ಕೆ ಸುಸ್ಥಿರ ಅಭಿವೃದ್ಧಿ ಅತ್ಯಗತ್ಯ. ನವೀಕರಿಸಬಹುದಾದ ಇಂಧನ ಯೋಜನೆಗಳಲ್ಲಿ ತುರ್ತು ಹೂಡಿಕೆ, ವಿಶೇಷವಾಗಿ ಗದಗದಲ್ಲಿ ಅದರ ನೈಸರ್ಗಿಕ ಪವನ ಶಕ್ತಿ ಕೇಂದ್ರಗಳ ಅಗತ್ಯವಿದೆ. ರಾಜ್ಯವು ಅಲ್ಪಸಂಖ್ಯಾತರ ಓಲೈಕೆ ನೀತಿಯನ್ನು ಮುಂದುವರೆಸಿದೆ. ಒಟ್ಟಾರೆಯಾಗಿ, ಕರ್ನಾಟಕ ಬಜೆಟ್-2024 ಜನರ ಅಗತ್ಯತೆಗಳನ್ನು ಪೂರೈಸುವಲ್ಲಿ ಹಿಂದುಳಿದಿದ್ದು, ನಮ್ಮ ಪ್ರದೇಶದ ಬೆಳವಣಿಗೆ ಮತ್ತು ಅಭಿವೃದ್ಧಿಯನ್ನು ಉತ್ತೇಜಿಸಲು ವಿಫಲವಾಗಿದೆ ಎಂದಿದ್ದಾರೆ.

## ನಿರಾಶದಾಯಕ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಸಿಎಂ ಸಿದ್ದರಾಮಯ್ಯ ಮಂಡಿಸಿರುವ ಬಜೆಟ್‌ನಲ್ಲಿ ರಾಜ್ಯದ ಎಲ್ಲ ವರ್ಗಗಳನ್ನು ಕಡೆಗಣಿಸಿದ್ದು, ಗ್ಯಾರಂಟಿ ಯೋಜನೆಯ ತಪ್ಪು ಮರೆಮಾಚಲು ರಾಜ್ಯದ ಇತಿಹಾಸದಲ್ಲಿಯೇ ಅತ್ಯಂತ ನಿರಾಶದಾಯಕ ಬಜೆಟ್‌ನ್ನು ಮಂಡಿಸಿದ್ದಾರೆ ಎಂದು ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ ನಿರಾಸೆ ವ್ಯಕ್ತಪಡಿಸಿದ್ದಾರೆ.

ಸಿದ್ದರಾಮಯ್ಯ ರಾಜ್ಯದ ಹಿತಾಸಕ್ತಿಯನ್ನು ಬದಿಗಿಟ್ಟು ಬಜೆಟ್ ಮಂಡಿಸಿದ್ದು, ಸಾಲದ ಹೊರೆಯನ್ನು ಪ್ರತಿಯೊಬ್ಬ ನಾಗರಿಕರ ಮೇಲೆ ಹೇರಿದ್ದಾರೆ. ಈ ಹಿಂದೆ 2013-2018ರ ಅವಧಿಯಲ್ಲಿ ಅಧಿಕಾರದಲ್ಲಿದ್ದಾಗಲೂ ದೊಡ್ಡ ಮಟ್ಟದ ಸಾಲ ಮಾಡಿದ್ದರು. ಈಗ ಮತ್ತೆ ತಮ್ಮ ಹಳೆಯ ಚಾಳಿಯನ್ನು ಮುಂದುವರೆಸಿದ್ದು, ಪ್ರತಿಯೊಬ್ಬ ಕನ್ನಡಿಗರ ತಲೆಯ ಮೇಲೆ 28 ಸಾವಿರ ರೂ ಸಾಲ ಆಗುವ ರೀತಿ ಮಾಡಿದ್ದಾರೆ.

ಹಲವು ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಜನತೆ ಕಷ್ಟ ಅನುಭವಿಸುತ್ತಿದ್ದಾರೆ. ವಿದ್ಯಾರ್ಥಿಗಳು ಬಸ್‌ನಲ್ಲಿ ಪ್ರಯಾಣಿಸಲು ಹರಸಾಹಸ ಪಡುತ್ತಿದ್ದಾರೆ. ಹೀಗಿರುವಾಗ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಯಾವುದೇ ಯೋಜನೆಗಳನ್ನು ಬಜೆಟ್‌ನಲ್ಲಿ ಅಳವಡಿಸಿಲ್ಲ. ಎಲ್ಲದಕ್ಕೂ ಕೇಂದ್ರ ಸರ್ಕಾರಕ್ಕೆ ಬೊಟ್ಟು ಮಾಡಿ ತೋರಿಸುವ ಇವರು ಸಿಎಂ ಯಾಕೆ ಆಗಬೇಕಿತ್ತು? ನರೇಂದ್ರ ಮೋದಿ ಹಿಂದಿನ ಯುಪಿಎ ಸರ್ಕಾರದ ಅವಧಿಗಿಂತಲೂ ಹೆಚ್ಚಿನ ಅನುದಾನವನ್ನು ರಾಜ್ಯಕ್ಕೆ ನೀಡಿದ್ದಾರೆ. ಈ ಬಗ್ಗೆ ದಾಖಲೆಯನ್ನು ಕೂಡ ಬಿಜೆಪಿಯಿಂದ ಬಿಡುಗಡೆಗೊಳಿಸಲಾಗಿದೆ. ತಮ್ಮ ತಪ್ಪು ಮರೆಮಾಚಲು ಕೇಂದ್ರಕ್ಕೆ ಬೊಟ್ಟು ಮಾಡಿ ತೋರಿಸುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

### ಶ್ರೀ ದ್ಯಾಮವ್ವ ದೇವಿ ಜಾತ್ರಾ ಮಹೋತ್ಸವದಲ್ಲಿ ಸೇವೆಗೈದ ಕಾರ್ಯಕರ್ತರಿಗೆ ಸನ್ಮಾನ

# ಸೇವೆಯಿಂದ ತಪಸ್ಸಿನ ಫಲ ಸಿಗುತ್ತದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಧಾರ್ಮಿಕ ಕಾರ್ಯಗಳಲ್ಲಿ ಸೇವೆಯ ಹಲವಾರು ಪ್ರಕಾರಗಳಿವೆ. ಸೇವೆಯಿಂದ ತಪಸ್ಸಿನ ಫಲ ದೊರಕುತ್ತದೆ. ಆದ್ದರಿಂದ ಎಲ್ಲರೂ ಸೇವಾ ಮನೋಭಾವನೆಯನ್ನು ಬೆಳೆಸಿಕೊಳ್ಳಲು ಮುಂದಾಗ ಬೇಕೆಂದು ನರೇಗಲ್ಲ ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ಗುರುವಾರ ಸಂಜೆ ಪಟ್ಟಣದ ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ದ್ಯಾಮವ್ವ ದೇವಿಯ ಪ್ರಾಂಗಣದಲ್ಲಿ ಕಳೆದ ಡಿಸೆಂಬರ್‌ನಲ್ಲಿ ಜರುಗಿದ ಶ್ರೀ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವದಲ್ಲಿ ವಿವಿಧ ಹಂತಗಳಲ್ಲಿ ಸೇವೆಗೈದ ಕಾರ್ಯಕರ್ತರ, ಜಾತ್ರಾ ಮಹೋತ್ಸವದ ಪ್ರಚಾರ ಮಾಡಿದ ಪತ್ರಕರ್ತರಿಗೆ ಸನ್ಮಾನ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

> ಮನುಷ್ಯನಿಗೆ ಸಮಾಜದಲ್ಲಿ ವಿವಿಧ ಬಗೆಗಳಿಂದ ಗೌರವ ಸಿಗುತ್ತದೆ. ಜ್ಞಾನದಿಂದ ಗೌರವ, ದಾನದಿಂದ ಗೌರವ ಮತ್ತು ಸೇವೆಯಿಂದ ಗೌರವ ದೊರಕುತ್ತದೆ. ಪಂಡಿತರು, ವಿದ್ವಾಂಸರು ತಮ್ಮ ಜ್ಞಾನದಿಂದ ಸೇವೆ ಸಲ್ಲಿಸಿದರೆ, ಶ್ರೀಮಂತರು, ಉಳ್ಳವರು ತಮ್ಮ ದಾನ ಗುಣದಿಂದ ಸೇವೆ ಸಲ್ಲಿಸುತ್ತಾರೆ. ಆದರೆ ಈ ಎರಡೂ ಭಾಗ್ಯ ಇಲ್ಲದವರು ಸೇವೆಯಿಂದ ತಮ್ಮ ಗೌರವವನ್ನು ಪಡೆಯುತ್ತಾರೆ. ಈ ಸೇವೆ ನಿಸ್ವಾರ್ಥ ಮತ್ತು ಶ್ರದ್ಧೆಯಿಂದ ಕೂಡಿರಬೇಕಾದುದು ಅವಶ್ಯ ಎಂದು ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ನುಡಿದರು.

ಕಳೆದ ಡಿಸೆಂಬರ್‌ನಲ್ಲಿ ಪಟ್ಟಣದ ಎಲ್ಲರೂ ಶ್ರದ್ಧೆ ಮತ್ತು ನಿಸ್ವಾರ್ಥ ಸೇವೆಯಿಂದ ದುಡಿದಿದ್ದರಿಂದ, ಉದಾರ ಮನಸ್ಸಿನ ದೇಣಿಗೆ ಸಲ್ಲಿಸಿದ್ದರಿಂದ ಗ್ರಾಮ ದೇವತೆಯ ಜಾತ್ರೆ ಅತ್ಯಂತ ವಿಜೃಂಭಣೆಯಿಂದ ಜರುಗಿತು. ಕಳಸಾರೋಹಣ ಕಾರ್ಯಕ್ರಮ ಮತ್ತು ವೈದಿಕ ವಿಧಿಯ ಎಲ್ಲ ಕಾರ್ಯಗಳ ನೇತೃತ್ವವನ್ನು ಹೆಬ್ಬಳ್ಳಿಯ ಪೂಜ್ಯರಾದ ಶ್ರೀ ದತ್ತಾವಧೂತರು ವಹಿಸಿಕೊಂಡಿದ್ದರಿಂದ ಧಾರ್ಮಿಕ ಕಾರ್ಯಗಳೆಲ್ಲವೂ ಯಶಸ್ಸು ಪಡೆದವು.

ಸ್ಥಳೀಯ ಋತ್ವಿಜರೂ ಸಹ ಈ ಕಾರ್ಯಕ್ಕೆ ಕೈ ಜೋಡಿಸಿದ್ದು ಕಾರ್ಯಕ್ರಮದ ಯಶಸ್ಸಿಗೆ ಕಾರಣವಾಯಿತು. ಹಿರೇಮಠದ ಜಾತ್ರೆಯೂ ಸಹ ಅಷ್ಟೇ ಸಡಗರ-ಸಂಭ್ರಮಗಳಿಂದ ಯಶಸ್ವಿಯಾಗಿ ಜರುಗಿದ್ದು ನರೇಗಲ್ಲ ಮತ್ತು ಮಜಿರೆ ಗ್ರಾಮಗಳ ಎಲ್ಲ ಭಕ್ತರ ಸಹಾಯ ಸಹಕಾರ ಕಾರಣ ಎಂದು ಸ್ಮರಿಸಿಕೊಂಡ ಶ್ರೀಗಳು, ಈ ಎರಡೂ ಧಾರ್ಮಿಕ ಕಾರ್ಯಗಳ ಯಶಸ್ಸಿಗೆ ಶ್ರಮಿಸಿದ ಎಲ್ಲರಿಗೂ ಗ್ರಾಮದೇವತೆ ಮತ್ತು ಶ್ರೀ ವೀರಭದ್ರ ದೇವರು ಆಶೀರ್ವದಿಸಲಿ ಎಂದು ಹಾರೈಸಿದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿ.ಎ. ಬೆಲ್ಲದ ಪ್ರಾರ್ಥಿಸಿ, ಜಾತ್ರಾ ಮಹೋತ್ಸವದ ಲೆಕ್ಕ ಪತ್ರ ಮಂಡಿಸಿದರು. ಗುರುರಾಜ ಕುಲಕರ್ಣಿ ಸ್ವಾಗತಿಸಿದರು. ಸಭೆಯನ್ನುದ್ದೇಶಿಸಿ ನಿವೃತ್ತ ಶಿಕ್ಷಕ ಎಮ್.ಎಸ್. ದಢೇಸೂರಮಠ ಮಾತನಾಡಿದರು. ಜಾತ್ರಾ ಮಹೋತ್ಸವ ಸಮಿತಿಯ ಅಧ್ಯಕ್ಷ ಬಾಳಪ್ಪ ಸೋಮಗೊಂಡ ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭದಲ್ಲಿ ಗಣ್ಯ ವರ್ತಕ ಮುತ್ತಣ್ಣ ಪಲ್ಲೇದ, ಎಸ್.ಕೆ. ಪಾಟೀಲ, ಬಾಳಪ್ಪ ಕಳಕೊಣ್ಣವರ, ಶೇಕಪ್ಪ ಲಕ್ಕನಗೌಡ್ರ, ವಿರುಪಾಕ್ಷಪ್ಪ ಲಕ್ಕನಗೌಡ್ರ, ರಮೇಶ ಹತ್ತಿಕಟಗಿ, ವಿರುಪಾಕ್ಷಪ್ಪ ಸೋಮಗೊಂಡ, ಶರಣಪ್ಪ ಸೋಮಗೊಂಡ, ಶರಣಪ್ಪ ಗಂಗರಗೊಂಡ, ಚಂದ್ರು ಹೊನವಾಡ, ಶರಣಪ್ಪ ಧರ್ಮಾಯತ, ಜಗದೀಶ ಹೊನವಾಡ, ಬಸವರಾಜ ಗೋಸಗೊಂಡ, ಕಳಕಪ್ಪ ಲಕ್ಕನಗೌಡ್ರ, ಮಲ್ಲಿಕಾರ್ಜುನಪ್ಪ ಜುಟ್ಲ, ನ್ಯಾಯವಾದಿ ಸೋಮು ಲಕ್ಕನಗೌಡ್ರ ಮುಂತಾದವರಿದ್ದರು. ಗುರುರಾಜ ಕುಲಕರ್ಣಿ ಸ್ವಾಗತಿಸಿದರು. ಶಿವಯೋಗಿ ಜಕ್ಕಲಿ ನಿರೂಪಿಸಿದರು. ಮುಖ್ಯ ಶಿಕ್ಷಕ ಸುನಿಲ ಅಂಬೇಕರ ವಂದಿಸಿದರು.

## ದಶಕದ ಕನಸು ಸಾಕಾರ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



2013-14ರ ಕಾಂಗ್ರೆಸ್ ಸರಕಾರದ ಅವಧಿಯಲ್ಲಿಯೇ ಜಾಲವಾಡಗಿ ಏತ ನೀರಾವರಿ ಯೋಜನೆ ಮತ್ತು ಶಿರಹಟ್ಟಿಯಲ್ಲಿ 100 ಹಾಸಿಗೆಯ ಆಸ್ಪತ್ರೆಯ ನಿರ್ಮಾಣಕ್ಕೆ ಪ್ರಸ್ತಾವನೆಯನ್ನು ಸಿದ್ಧಪಡಿಸಿ ಸರಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. 2018ರಲ್ಲಿ ಗದಗನಲ್ಲಿ ಸಿಎಂ ಸಿದ್ದರಾಮಯ್ಯ ಅವರು ಯೋಜನೆಗೆ ಅನುದಾನ ಬಿಡುಗಡೆ ಮಾಡುವುದಾಗಿ ಭರವಸೆ ನೀಡಿದ್ದರು. ಇದೀಗ ಆ ಭರವಸೆ ಈಡೇರಿದೆ ಎಂದು ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಹರ್ಷ ವ್ಯಕ್ತಪಡಿಸಿದ್ದಾರೆ.

ನಂತರ ಚುನಾವಣಾ ನೀತಿ ಸಂಹಿತೆ ಬಂದಿದ್ದರಿಂದ ಅನುದಾನ ಮಂಜೂರಾಗಲಿಲ್ಲ. ಇದೀಗ ಮತ್ತೆ ಅವರೇ ಸಿಎಂ ಆಗಿ ಈ ಎರಡು ಯೋಜನೆಗಳಿಗೂ ಬಜೆಟ್‌ನಲ್ಲಿ ಅನುದಾನ ಮೀಸಲಿರಿಸಿ ರೈತ ವರ್ಗಕ್ಕೆ ನೆರವಾಗಿದ್ದಾರೆ. ಇದರಿಂದ ಗದಗ, ರೋಣ ಮತ್ತು ಶಿರಹಟ್ಟಿ ಮತಕ್ಷೇತ್ರದ ಜನತೆಗೆ ಅನುಕೂಲವಾಗಲಿದೆ. ಬಜೆಟ್‌ನಲ್ಲಿ ಅನುದಾನ ಮೀಸಲಿರಿಸುವಲ್ಲಿ ಶ್ರಮಿಸಿದ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ರೋಣ ಶಾಸಕ ಜಿ.ಎಸ್. ಪಾಟೀಲ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

## ನಿರಾಸೆಯ ಬಜೆಟ್ ನಿರೀಕ್ಷಿಸಿರಲಿಲ್ಲ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಸಿದ್ದರಾಮಯ್ಯ ಮಂಡಿಸಿದ ಬಜೆಟ್ ರಾಜಕೀಯ ಪ್ರೇರಿತವಾಗಿದೆ. ಬಿಜೆಪಿ ಶಾಸಕರಿರುವ ಕ್ಷೇತ್ರಕ್ಕೆ ಅನ್ಯಾಯ ಮಾಡಿದ್ದಾರೆ. ಕುಡಿಯುವ ನೀರು, ರಸ್ತೆ ಸೇರಿ ಮೂಲಭೂತ ಸೌಲಭ್ಯಗಳಿಗೆ ಅನುದಾನ ಕಲ್ಪಿಸುವಂತೆ ಮಾಡಿದ ಮನವಿ ನಿರ್ಲಕ್ಷಿಸಿದ್ದಾರೆ ಎಂದು ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ದೀಪದ ಕಳೆಗೆ ಕತ್ತಲು ಎನ್ನುವಂತೆ ಲಕ್ಷ್ಮೇಶ್ವರ, ಶಿರಹಟ್ಟಿ, ಮುಂಡರಗಿ ತಾಲೂಕಿಗೆ ಹೊಂದಿಕೊಂಡೇ ತುಂಗಭದ್ರಾ ನದಿ ಹರಿದಿದ್ದರೂ ಕುಡಿಯುವ ನೀರು, ನೀರಾವರಿ, ರಸ್ತೆ, ಯಲವಗಿ-ಗದಗ ರೇಲ್ವೆ, ಹೊಸ ತಾಲೂಕಿನ ಸೌಲಭ್ಯಕ್ಕೆ ಯಾವುದೇ ಅನುದಾನ ಕಲ್ಪಿಸಿಲ್ಲ. 15 ಬಾರಿ ಬಜೆಟ್ ಮಂಡಿಸಿರುವ ಸಿದ್ಧರಾಮಯ್ಯನವರಿಂದ ಇಂತಹ ನಿರಾಸೆಯ ಬಜೆಟ್ ನಿರೀಕ್ಷಿಸಿರಲಿಲ್ಲ. ಮಾಜಿ ಸಿ.ಎಂ ಬಸವರಾಜ ಬೊಮ್ಮಾಯಿ ಸರಕಾರವೇ ಶಿರಹಟ್ಟಿ ತಾಲೂಕಾ ಆಸ್ಪತ್ರೆ ಮೇಲ್ದರ್ಜೆಗೇರಿಸಿತ್ತು. ಮುಂದುವರೆದು ಈಗ ಆಸ್ಪತ್ರೆ ಮತ್ತು ಏತ ನೀರಾವರಿ ಯೋಜನೆಗೆ ಅನುದಾನ ಕಲ್ಪಿಸುವ ಮೂಲಕ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಲಾಗಿದ್ದರೂ ಶಾಸಕನಾಗಿ ಸ್ವಾಗತಿಸುತ್ತೇನೆ ಎಂದಿದ್ದಾರೆ.

## ಸುಳ್ಳಿನ ಕಂತೆಯ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಸಿಎಂ ಸಿದ್ದರಾಮಯ್ಯ ಮಂಡಿಸಿದ 2024-25ನೇ ಸಾಲಿನ ಬಜೆಟ್ ಸುಳ್ಳಿನಿಂದ ಕೂಡಿದ, ಚುನಾವಣಾ ಪ್ರೇರಿತ ಬಜೆಟ್ ಎಂದು ಹಿರಿಯ ನ್ಯಾಯವಾದಿ ಎಂ.ಎಂ. ಹಿರೇಮಠ ಖಂಡಿಸಿದ್ದಾರೆ.

ಈಗಾಗಲೇ ಬಿಟ್ಟಿ ಗ್ಯಾರಂಟಿಗಳಿಂದ ರಾಜ್ಯದ ಬೊಕ್ಕಸಕ್ಕೆ ಸುಮಾರು 60 ಸಾವಿರ ಕೋಟಿಗಳಿಗಿಂತ ಹೆಚ್ಚಿನ ಹೊರೆಯಾಗಿದ್ದು, ನೌಕರರ ಸಂಬಳಕ್ಕೆ, ರಾಜ್ಯದ ಸಾಲದ ಮೇಲಿನ ಬಡ್ಡಿಯನ್ನು ತೀರಿಸಲು ಸಾಕಷ್ಟು ಹಣ ಖರ್ಚಾಗುವುದರಿಂದ ಅಭಿವೃದ್ಧಿಗೆ ಹಣ ಉಳಿಯುವದಿಲ್ಲ. ರಾಜ್ಯದ ಜನರ ನೀರಿಕ್ಷೆಗಳೆಲ್ಲ ಸುಳ್ಳಾಗಿವೆ. ರಾಜ್ಯದ ಯುವಕರು, ದಲಿತರು, ಬಡಕೂಲಿಕಾರರ ನೀರಿಕ್ಷೆಗಳು ಹುಸಿಯಾಗಿವೆ. ಹೊಸ ಅಭಿವೃದ್ಧಿ ವಿಚಾರಗಳಿಲ್ಲ. ರಾಜ್ಯದ ಅಭಿವೃದ್ಧಿ ಸಂಪೂರ್ಣವಾಗಿ ನಿಂತುಹೋಗಲಿದೆ. ಪಾಕಿಸ್ತಾನ ದಿವಾಳಿ ಆದ ಹಾಗೆ ಕರ್ನಾಟಕ ಸರ್ಕಾರವೂ ದೀವಾಳಿಯಾಗಲಿದೆ ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ಕನ್ನಡಿಗರಿಗೆ ಸಾಲದ 'ಗ್ಯಾರಂಟಿ' ನೀಡಿದ ಬಜೆಟ್

■ವಿಜಯಸಾಕ್ಷಿ ಸುದ್ದಿ, ಗದಗ



ಅಧಿಕಾರದಾಸೆಗಾಗಿ ಘೋಷಿಸಿದ ಗ್ಯಾರಂಟಿಗಳ ಜಾರಿಗಾಗಿ ರಾಜ್ಯ ಸರ್ಕಾರ ಕನ್ನಡಿಗರ ಮೇಲೆ ಸಾಲದ ಭಾರ ಹೊರಿಸಲು ಮುಂದಾಗಿದ್ದು, ಇದು ಸಾಲದ 'ಗ್ಯಾರಂಟಿ' ಬಜೆಟ್ ಆಗಿದೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ವ್ಯಂಗ್ಯವಾಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಧಾನಿ ನರೇಂದ್ರ ಮೋದಿಯವರು ಸಾಲ ಮಾಡುತ್ತಾರೆ ಎಂದು ಸುಳ್ಳು ಹೇಳುವ ಸಿದ್ಧರಾಮಯ್ಯನವರು ಈಗ ತಾವೇನು ಮಾಡುತ್ತಿದ್ದಾರೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು.

ಕೇಂದ್ರ ಸರ್ಕಾರ ರಾಜ್ಯಕ್ಕೆ ಕೊಡುಗೆ ಕೊಟ್ಟಿಲ್ಲ ಎಂದು ಜನರನ್ನು ನಂಬಿಸಲು ಮುಖ್ಯಮಂತ್ರಿಗಳು ಹಾತೊರೆಯುತ್ತಿದ್ದಾರೆ. ಆದರೆ ರಾಜ್ಯದ ಜನರಿಗೆ ಸಿದ್ಧರಾಮಯ್ಯ ಸರ್ಕಾರದಿಂದಲೇ ಸಾಕಷ್ಟು ಹಾನಿ ಇದೆ ಎಂಬುದನ್ನು ಈ ಬಜೆಟ್ ಖಾತ್ರಿಪಡಿಸಿದ್ದು, ಅಧಿಕಾರಕ್ಕೆ ಬಂದ ಕೆಲವೇ ತಿಂಗಳುಗಳಲ್ಲಿ ಸುಮಾರು 2 ಲಕ್ಷ ಕೋಟಿ ಸಾಲ ಮಾಡುವ ಮೂಲಕ ರಾಜ್ಯವನ್ನು ದಿವಾಳಿಯಾಗಿಸುತ್ತಿದ್ದಾರೆ. ಓಪಿಎಸ್ ಜಾರಿಗೊಳಿಸುತ್ತೇವೆ ಎಂಬ ಮಾತನ್ನು ಸಹ ಉಳಿಸಿಕೊಂಡಿಲ್ಲ, ಜೊತೆಗೆ ಏಳನೇ ವೇತನ ಆಯೋಗ ಜಾರಿಯ ಸ್ಪಷ್ಟ ಘೋಷಣೆ ಸಹ ಇಲ್ಲ. ತುಷ್ಟೀಕರಣ-ಓಲೈಕೆ ಬಜೆಟ್‌ನಲ್ಲಿ ಎದ್ದುಕಾಣುತ್ತಿದ್ದು, 14 ಬಜೆಟ್ ಮಂಡಿಸಿರುವ ಸಿದ್ಧರಾಮಯ್ಯನವರು ಇಂಥದೊಂದು ದುರದೃಷ್ಟಕರ ಬಜೆಟ್ ಮಂಡಿಸಿರುವುದು ರಾಜ್ಯದ ಜನರ ದುರ್ದೈವ ಎಂದು ಅಭಿಪ್ರಾಯಪಟ್ಟಿದ್ದಾರೆ.

## ಕನ್ನಡಿಗರ ತೆರಿಗೆ ಹಣ ಪೋಲು



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕಾಂಗ್ರೆಸ್ ಸರ್ಕಾರ ತನ್ನ ಕರ್ಮಕಾಂಡಗಳನ್ನು ಮುಚ್ಚಿಕೊಳ್ಳಲು, ಅಭಿವೃದ್ಧಿಯನ್ನು ಮರೆಮಾಚಲು, ಗ್ಯಾರಂಟಿಗಳಿಂದ ತಪ್ಪಿಸಿಕೊಳ್ಳಲು ಬಜೆಟ್‌ನಲ್ಲಿ ಸಾಲ-ಸುಳ್ಳು ಬಿಟ್ಟರೆ ಬೇರೆ ಏನೂ ಇಲ್ಲ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಫಕ್ಕೀರೇಶ್ ರಟ್ಟಿಹಳ್ಳಿ ವ್ಯಂಗ್ಯವಾಡಿದ್ದಾರೆ.

ಸರ್ವಜನಾಂಗದ ಶಾಂತಿಯ ತೋಟದಲ್ಲಿ ಕಾಂಗ್ರೆಸ್ ಕೋಮು ಸಂಘರ್ಷ ಹುಟ್ಟು ಹಾಕಿದೆ. ಕುರ್ಚಿ ಉಳಿಸಿಕೊಳ್ಳುವ ಸರ್ಕಸ್‌ನಲ್ಲಿ ಕರ್ನಾಟಕ ಬಡವಾಗುತ್ತಿದೆ, ಕನ್ನಡಿಗರ ತೆರಿಗೆ ಹಣ ಪೋಲಾಗುತ್ತಿದೆ ಎಂದು ಅವರು ಪ್ರತಿಕ್ರಿಯೆ ನೀಡಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka